₹ 4 ಪುಟ: 4 ಸಂಪುಟ: 4 ಸಂಚಿಕೆ 53 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 Issue: 53 Tuesday, 11, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ರಾಜುಕುಮಾರ್ ಕುಟುಂಬಕ್ಕೆ ನೀಡಿದ ಮಾತನ್ನು ಮರೆತು ಬಿಟ್ಟರಾ ಸಿಎಂ ಬೊಮ್ಮಾಯಿ: ಡಿಕೆಶಿ ಪ್ರಶ್ನೆ



ಹಾಸನ: ನಂದಿನಿ ಉತ್ಪನ್ನಗಳಿಗೆ ಅಂಬಾಸಿಡರ್ ಆಗಿ ಕೆಲಸ ಮಾಡಿದ ದಿ.ಡಾ ರಾಜ್ಕುಮಾರ್ ಹಾಗೂ ದಿ.ಪುನೀತ್ ರಾಜ್ಕುಮಾರ್ ಅವರ ಆಚಾ–ರ – ವಿಚಾರಗಳನ್ನು ಪ್ರಚಾರ ಮಾಡುವ ಮೂಲಕ ನಂದಿನಿ ಉತ್ಪನ್ನ ಖರೀದಿಸಿ ರೈತರ ಬದುಕಿಗೆ ಸಹಕಾರಿಯಾಗೋಣ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಹೇಳಿದರು.

ನಗರದ ಹೇಮಾವತಿ ಪ್ರತಿಮೆ ಬಳಿ ಇರುವ ನಂದಿನಿ ಉತ್ಪನ್ನಗಳ ಮಳಿಗೆಗೆ ಭೇಟಿ ನೀಡಿ ನಂತರ ಮಾಧ್ಯಮದೊಂದಿಗೆ ಮಾತನಾಡಿದ ಅವರು, ಇದು ಕರ್ನಾಟಕ ರಾಜ್ಯದ ಎಲ್ಲ ರೈತರ ಬದುಕಿನ ಪ್ರಶ್ನೆಯಾಗಿದೆ. ಸುಮಾರು 70 ಲಕ್ಷ ಜನ ರೈತರು ಹಾಲು ಉತ್ಪಾದನೆ ಮಾಡುತ್ತಿದ್ದಾರೆ. ನಂದಿನಿ ರೈತರು ಕಟ್ಟಿದಂತಹ ಸಂಸ್ಥೆ. ಲೀಟರ್ ಗೆ 27–28 ರೂ ಕೊಡುತ್ತಾರೆ. ಸರ್ಕಾರ 5 ರೂ. ಸಹಾಯಧನ ಕೊಡುತ್ತಿದೆ. ಗುಜರಾತ್ನ ಅಮುಲ್ ಕೂಡ ರೈತರದ್ದು. ನಮ್ಮ ತಕರಾರೇನಿಲ್ಲ. ಆದರೆ, ನಮ್ಮನ್ನು ಹಿಂದೆ ತಳ್ಳಿ ಅಮುಲ್ ಸಂಸ್ಥೆಯನ್ನು ಸರ್ಕಾರ ಪ್ರೋತ್ಸಾಹ ಮಾಡುವ ಕೆಲಸ ಮಾಡುತ್ತಿರುವುದು ಸರಿಯಲ್ಲ ಎಂದರು.

ಈ ನಂದಿನಿ ನಮ್ಮದು. ನಮ್ಮ ಹಾಲು ನಮ್ಮ ಬದುಕು. ಎಲ್ಲ ಬೆಲೆಗಳು ಹೆಚ್ಚಾಗಿವೆ. ಆದರೆ, ರೈತರಿಗೆ ಯಾವ ತರಹದ ಸಹಾಯವಾಗಿಲ್ಲ. ರೈತರಿಗೆ ಹಾಲು ಉತ್ಪಾದನೆ ಮಾಡಲು ಸರ್ಕಾರ ಸಹಾಯ ಮಾಡಿಲ್ಲ. ಈ ಮಧ್ಯೆ ನಮ್ಮ ಹಾಲನ್ನು ನಾವು ಮಾರಾಟ ಮಾಡಲು ಆಗದಿರುವ ಪರಿಸ್ಥಿತಿ ಇದೆ. ಹಾಗಾಗಿ ನಾವೇ ಪ್ರೋತ್ಸಾಹ ಕೊಟ್ಟು ಹಾಲು ಉತ್ಪಾದನೆ ಮಾಡಲು ಹೊರಟಿದ್ದೇವೆ. ಹಾಲಿನ ಉತ್ಪನ್ನಗಳಾದ ಮೈಸೂರು ಪಾಕ್, ಪೆಡಾ, ಬಿಸ್ಕೆಟ್, ಚಾಕೊಲೇಟ್ನ್ನು ಪಕ್ಷದ ಅಧ್ಯಕ್ಷನಾಗಿ ಖರೀದಿ ಮಾಡಿದ್ದೇನೆ. ನಮ್ಮ ರೈತರನ್ನು ಉಳಿಸಿಕೊಳ್ಳಬೇಕು, ನಮ್ಮ ನಂದಿನಿಯನ್ನು ಉಳಿಸಿಕೊಳ್ಳಬೇಕು ಎಂದು ಡಿಕೆಶಿ ಕರೆ ನೀಡಿದರು.

ಡಿಕೆಶಿ ಆರೋಪಕ್ಕೆ ಸಿಎಂ ಬೊಮ್ಮಾಯಿ ತಿರುಗೇಟು: "ನಂದಿನಿ ನಮ್ಮ ರಾಜ್ಯದ ಉತ್ತಮ ಬ್ರ್ಯಾಂಡ್, ಚುನಾವಣಾ ಸಮಯದಲ್ಲಿ ಕಾಂಗ್ರೆಸ್ ಮತ್ತು ಜೆಡಿ–ಎಸ್ ರಾಜಕೀಯ ಮಾಡುತ್ತಿವೆ" ಎಂದು ಸಿಎಂ ಬಸವರಾಜ ಬೊಮ್ಮಾಯಿ ದೆಹಲಿಯಲ್ಲಿ ತಿರುಗೇಟು ನೀಡಿದ್ದಾರೆ.

ನಮ್ಮ ರೈತರನ್ನು ಉಳಿಸಿಕೊಳ್ಳಬೇಕು ಎಂದು ಡಾ. ರಾಜ್ಕುಮಾರ್, ಆದಾದ ಮೇಲೆ ಪುನೀತ್ ರಾಜ್ಕುಮಾರ್ ಅವರು ನಂದಿನಿ ಹಾಲಿಗೆ ಪ್ರಚಾರಕರಾಗಿದ್ದರು. ಮುಖ್ಯಮಂತ್ರಿಗಳೇ ನೀವು ಅವರ ಬಗ್ಗೆ ಇಷ್ಟು ಗೌರವದ ಮಾತುಗಳನ್ನು ಆಡಿದ್ದೀರಿ. ರಾಜ್ಕುಮಾರ್, ಪುನೀತ್ ರಾಜ್ಕುಮಾರ್ ಅವರನ್ನು ನೆನಪಿಸಿಕೊಳ್ಳುತ್ತಿದ್ದೀರಿ. ಪುನೀತ್ ಅವ–ರಿಗೆ ಮಾತು ಕೊಟ್ಟಿರುವುದು ಸುಳ್ಳ, ನಾಟಕನಾ?. ರಾಜ್ಕುಮಾರ್ ಅವರು ಇಂದು ಇಲ್ಲದಿರಬಹುದು, ಪುನೀತ್ ರಾಜ್ಕುಮಾರ್ ಇಲ್ಲದಿರಬಹುದು. ಆದ–ರೆ ಅವರು ರಾಜ್ಯಕ್ಕೆ ಮಾಡಿದ ಸೇವೆ ಏನು ಎಂದು ಎಲ್ಲರಿಗೆ ಗೊತ್ತಿದೆ. ರೈತರು ಬದುಕಬೇಕು ಅಂತಾ ರಾಯಭಾರಿ ಆಗಿ ಕೆಲಸ ಮಾಡಿದ್ದಾರೆ ಎಂದು ತಿಳಿಸಿದರು.

ನೀವು ಮುಖ್ಯಮಂತ್ರಿಯಾಗಿ ಇನ್ನೊಂದು ತಿಂಗಳು ಇರುತ್ತೀರೋ, ಒಂದೂವರೆ ತಿಂಗಳು ಇರುತ್ತೀರೋ ಗೊತ್ತಿಲ್ಲ. ನಿಮ್ಮದು ಮುಗೀತು. ಯಾಕೆ ನಮ್ಮ ರೈತ–ರಿಗೆ ಅವಮಾನ ಮಾಡುತ್ತೀದ್ದೀರಿ? ಅದಕ್ಕೆ ನಾನು ಪ್ರತಿಭಟನೆ ಮಾಡಲು ಬಂದಿಲ್ಲ. ನಾನು ಬೆಳಗ್ಗೆ ಹಾಲು ತಗೋಬೇಕಿತ್ತು. ಹಾಲು ತೆಗೆದುಕೊಂಡಿದ್ದೀನಿ, ಬಿಸ್ಕೆಟ್ ತೆಗೆದುಕೊಂಡಿದ್ದೀನಿ ಅಷ್ಟೇ ಎಂದು ಡಿ ಕೆ ಶಿವಕುಮಾರ್ ಕುಟುಕಿದರು.

ಅಮುಲ್ ಇರಲಿ. ಬೇರೆ ಬೇರೆ ಕಡೆ ಇದೆ. ಮೊದಲು ನಿಮ್ಮ ಮನೆಯ ರೈತರನ್ನು ಉಳಿಸಿಕೊಳ್ಳಿ. ನಷ್ಟವಾದರೂ ಕೂಡ ರೈತರು ನಂದಿನಿಗೆ ಹಾಲು ಹಾಕ್ತಿದ್ದಾರೆ. ಇಲ್ಲಿ ರೇವಣ್ಣ, ಅಲ್ಲಿ ಬಾಲಚಂದ್ರ ಜಾರಕಿಹೋಳಿ ಅಧ್ಯಕ್ಷರಾಗಿದ್ದಾರೆ. ಅಮುಲ್ಗಿಂತ ದೊಡ್ಡದು ನಾವು ಕನಕಪುರದಲ್ಲಿ ಮಾಡಿದ್ದೀವಿ. ರಾಜ್ಯದ, ರೈತರ ಆಸ್ತಿ ನಂದಿನಿ. ಇದನ್ನು ಉಳಿಸಬೇಕು, ಬೆಳೆಸಬೇಕು ಎಲ್ಲರೂ ಕೂಡ ಸಹಕಾರ ಕೊಡಿ ಎಂದು ಅವರು ಮನವಿ ಮಾಡಿದರು.

ಅಭ್ಯರ್ಥಿ ಪಟ್ಟಿ ಬಿಡುಗಡೆ ಮಾಡದ ಬಗ್ಗೆ ಮಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಡಿ.ಕೆ ಶಿವಕುಮಾರ್ ಹಾಸನದಲ್ಲಿ ಕಾಂಗ್ರೆಸ್ 3ನೇ ಪಟ್ಟಿ ಬಗ್ಗೆ ಆಮೇಲೆ ಮಾತನಾಡುತ್ತೇನೆ. ಕೆಲ ದಿನಗಳಲ್ಲೇ ಪಟ್ಟಿ ಬಿಡುಗಡೆ ಮಾಡುವುದಾಗಿ ಅವರು ತಿಳಿಸಿದರು.

## ಇಂದು ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ: ಬಿಎಸ್‌ವೈ



ಬೆಂಗಳೂರು: ರಾಜ್ಯ ವಿಧಾನಸಭೆ ಚುನಾವಣೆಗೆ ಸಂಬಂಧಿಸಿದ ಬಿಜೆಪಿ ಅಭ್ಯರ್ಥಿಗಳ ಪಟ್ಟಿಯನ್ನು ಇಂದು ಮಂಗಳವಾರ ಬಿಡುಗಡೆ ಮಾಡುವ ವಿಶ್ವಾಸವಿದೆ ಎಂದು ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ಅವರು ತಿಳಿಸಿದರು. ನಗರದ ವಿಮಾನನಿಲ್ದಾಣದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಕರ್ನಾಟಕದ 224 ಕ್ಷೇತ್ರಗಳ ಬಗ್ಗೆ ದೆಹಲಿಯಲ್ಲಿ 2– 3 ಬಾರಿ ಸುದೀರ್ಘ ಚರ್ಚೆ ಆಗಿದೆ. ಪ್ರಧಾನಿ ನರೇಂದ್ರ ಮೋದಿಯವರೂ ಚರ್ಚೆಯಲ್ಲಿ ಭಾಗವಹಿಸಿದ್ದರು. ಟಿಕೆಟ್ ಹಂಚಿಕೆ ವಿಚಾರದಲ್ಲಿ ಯಾವುದೇ ಗೊಂದಲ ಇಲ್ಲ ಎಂದು ತಿಳಿಸಿದರು. ಹೈಕಮಾಂಡ್ ತೀರ್ಮಾನಕ್ಕೆ ನಾವೆಲ್ಲರೂ ಬದ್ಧರಾಗಿರಬೇಕು. ಚರ್ಚೆ ಮತ್ತು ವಿಧಾನಸಭೆಯ ಅಭ್ಯರ್ಥಿಗಳ ಪಟ್ಟಿಯನ್ನು ಗಮನಿಸಿದಾಗ ಬಿಜೆಪಿ ರಾಜ್ಯದಲ್ಲಿ ಬಹುಮತ ಪಡೆದು ಸರಕಾರ ರಚಿಸುವುದು ನಿಶ್ಚಿತ ಎಂಬ ಭಾವನೆ ಮೂಡಿದೆ ಎಂದು ನುಡಿದರು. 224 ಕ್ಷೇತ್ರಗಳ ಕುರಿತು ಸಭೆಯಲ್ಲಿ ಚರ್ಚೆ ಆಗಿದೆ. ಎಷ್ಟು ಜನರ ಪಟ್ಟಿ ಎಂಬ ಕುರಿತು ಅಂದಾಜಿಲ್ಲ. 15–20 ಕ್ಷೇತ್ರಗಳನ್ನು ಹೊರತುಪಡಿಸಿ ಉಳಿದೆಲ್ಲ ಕ್ಷೇತ್ರಗಳ ಅಭ್ಯರ್ಥಿಗಳ ವಿವರವನ್ನು ಇಂದು ಬಿಡುಗಡೆ ಮಾಡಬಹುದು ಎಂದು ಅವರು ಪ್ರಶ್ನೆಗೆ ಉತ್ತರ ಕೊಟ್ಟರು. ಹಾಲಿ ಶಾಸಕರಿಗೆ ಟಿಕೆಟ್ ನೀಡದಿರುವ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಚರ್ಚೆಗಳು ನಡೆದಿವೆ. ಯಾರೋ ಮೂರ್ನಾಲ್ಕು ಜನರಿಗೆ ಸಿಗದೆ ಇರಬಹುದು. ಈ ವಿಷಯದಲ್ಲಿ ಹೈಕಮಾಂಡ್ ಅಂತಿಮ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ತಿಳಿಸಿದರು.

## ಅರುಣಾಚಲ ಪ್ರದೇಶಕ್ಕೆ ಶಾ ಭೇಟಿ: ಚೀನಾ ಆಕ್ಷೇಪ



ಇಟಾನಗರ: ಕೇಂದ್ರ ಗೃಹ ಸಚಿವ ಅಮಿತ್ ಶಾ ಅರುಣಾಚಲ ಪ್ರದೇಶ ಭೇಟಿ ಕೈಗೊಂಡಿರುವುದನ್ನು ಚೀನಾ ತೀವ್ರವಾಗಿ ವಿರೋಧಿಸಿದೆ. ಈ ಪ್ರದೇಶದಲ್ಲಿನ ಅಧಿಕೃತ ಚಟುವಟಿಕೆಗಳು ಚೀನಾದ ಸಾರ್ವಭೌಮತ್ವಕ್ಕೆ ಧಕ್ಕೆ ಎಂದು ಹೇಳಿರುವುದಾಗಿ ರಾಯಿಟರ್ಸ್ ವರದಿ ಮಾಡಿದೆ.

ಅರುಣಾಚಲ ಪ್ರದೇಶದಲ್ಲಿನ ಕೆಲವೊಂದು ಸ್ಥಳಗಳ ಹೆಸರನ್ನು ಚೀನಾ ಬದಲಿಸಿದ್ದು, ಈ ಪ್ರದೇಶ ತನ್ನ "ಸಾರ್ವಭೌಮತ್ವ" ಎಂದು ಹೇಳಿಕೊಂಡಿದೆ. ಈ ಮಧ್ಯೆ ಅರುಣಾಚಲ ಪ್ರದೇಶಕ್ಕೆ ಇಂದಿನಿಂದ ಎರಡು ದಿನ ಭೇಟಿ ನೀಡಿರುವ ಅಮಿತ್ ಶಾ, ಕಿಬಿತೊ ಗ್ರಾಮದಲ್ಲಿ 9 ಮಿನಿ ಜಲ ವಿದ್ಯುತ್ ಯೋಜನೆ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಂಜ್ವಾ ಜಿಲ್ಲೆಯ ಕಿಬಿತೋದಲ್ಲಿ ಐಟಿಬಿಪಿ ಸಿಬ್ಬಂದಿಯೊಂದಿಗೆ ಶಾ ಸಂವಾದ ನಡೆಸಲಿದ್ದು, ಮಂಗಳವಾರ ವಲಾಂಗ್ ಹುತಾತ್ಮರ ಯೋಧರಿಗೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ.

## ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಬಿ.ಎನ್. ಚಂದ್ರಪ್ ಆಯ್ಕೆ ಸತೀಶ್ ಜಾರಕಿಹೊಳಿ ಅಭಿನಂದನೆ



ಬೆಳಗಾವಿ: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ನೂತನ ಕಾರ್ಯಾಧ್ಯಕ್ಷರಾಗಿ ನೇಮಕವಾದ ಮಾಜಿ ಸಂಸದ, ಹಿರಿಯ ನಾಯಕ ಬಿ.ಎನ್. ಚಂದ್ರಪ್ಪ ಅವರಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಅಭಿನಂದನೆ ಸಲ್ಲಿಸಿದ್ದಾರೆ.

ಮಾಜಿ ಸಂಸದ, ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಬಿ.ಎನ್. ಚಂದ್ರಪ್ಪ ಅವರು ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಆಯ್ಕೆಯಾಗಿದ್ದು ಸಂತಸ ತಂದಿದೆ. ಅವರ ಪಕ್ಷ ಸಂಘಟನೆ ಹಾಗೂ ಜನಪರ ಕಾರ್ಯಗಳಲ್ಲಿ ಇಡೀ ಪಕ್ಷ ತಮ್ಮ ಜತೆ ನಿಲ್ಲಲಿದೆ ಎಂದು ಎಂದು ತಿಳಿಸಿದ್ದಾರೆ.

## ಬೆಳಗಾವಿ ಜಿಲ್ಲೆ ಮೂರು ಕ್ಷೇತ್ರಗಳಿಗೆ ಎಎಪಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ


ಬೆಳಗಾವಿ: ದೆಹಲಿ ಮತ್ತು ಪಂಜಾಬ್ ರೀತಿಯಲ್ಲಿ ಕರ್ನಾಕದಲ್ಲೂ ಅಧಿಕಾರದ ಗದ್ದುಗೆ ಏರಬೇಕೆಂಬ ಮಹದಾಸೆಯಿಂದ ಚುನಾವಣಾ ಅಖಾಡಕ್ಕೆ ಇಳಿದಿರುವ ಆಮ್ ಆದ್ಮಿ ಪಕ್ಷ ರಾಜ್ಯದಲ್ಲಿ ಭರ್ಜರಿ ಪ್ರಚಾರ ನಡೆಸುತ್ತಿದೆ.

ದೆಹಲಿಯ ಸಿಎಂ ಅರವಿಂದ್ ಕೇಜ್ರಿವಾಲ್ ನೀಡುತ್ತಿರುವ ಜನಪರ ಆಡಳಿತವನ್ನು ರಾಜ್ಯದಲ್ಲೂ ನೀಡುತ್ತೇವೆ ಎಂಬ ಭರವಸೆಯೊಂದಿಗೆ ಆಪ್ ಜನರ ಬಳಿ ಮತಯಾಚನೆ ಮಾಡುತ್ತಿದೆ. ಎಲ್ಲ 224 ಕ್ಷೇತ್ರಗಳಲ್ಲೂ ಆಪ್ ಸ್ಪರ್ಧೆ ಮಾಡಲು ಮುಂದಾಗಿದೆ.

ಈಗಾಗಲೇ ಎರಡು ಹಂತದಲ್ಲಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿರುವ ಆಪ್ ಇದೀಗ ಬೆಳಗಾವಿ ಸೇರಿದಂತೆ ವಿವಿಧ ಜಿಲ್ಲೆಗಳ ಅಭ್ಯರ್ಥಿಗಳ ಮೂರನೇ ಪಟ್ಟಿಯನ್ನು ಬಿಡುಗಡೆ ಮಾಡಿದೆ.

ಮೊದಲ ಹಂದತದಲ್ಲಿ ಎಎಪಿ 80 ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿದೆ. ಎರಡನೇ ಹಂತದಲ್ಲಿ 60 ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿದ್ದು, 2ನೇ ಪಟ್ಟಿಯಲ್ಲಿ 11 ಮಹಿಳೆಯರಿಗೆ ಅವಕಾಶ ನೀಡಲಾಗಿದೆ. 14 ರೈತರಿಗೂ ಸ್ಪರ್ಧೆಗೆ ಅವಕಾಶ ಕಲ್ಪಿಸಲಾಗಿದೆ. ಓರ್ವ ಬಿಎಂಟಿಸಿ ಮಾಜಿ ಕಂಡಾಕ್ಟರ್ ಗೂ ಅವಕಾಶ ನೀಡಲಾಗಿದೆ.

## ಹುಲಿ ಗಣತಿ ವರದಿ: ದೇಶದ ಅಗ್ರ 12ರಲ್ಲಿ ಕರ್ನಾಟಕದ ಎಲ್ಲಾ ಹುಲಿ ಸಂರಕ್ಷಿತ ಪ್ರದೇಶಗಳಿಗೆ ಸ್ಥಾನ



ಬೆಂಗಳೂರು: ಪ್ರಧಾನಮಂತ್ರಿ ನರೇಂದ್ರ ಮೋದಿ ಭಾನುವಾರ ಬಿಡುಗಡೆ ಮಾಡಿರುವ ಭಾರತದ ಹುಲಿ ಸಂರಕ್ಷಿತ ವರದಿಯ ಐದನೇ ನಿರ್ವಹಣೆ ಪರಿಣಾಮಕಾರಿತ್ವ ಮೌಲ್ಯಮಾಪನದಲ್ಲಿ ಕರ್ನಾಟಕದ ಎಲ್ಲಾ ಐದು ಹುಲಿ ಸಂರಕ್ಷಿತ ಪ್ರದೇಶಗಳು ಅಗ್ರ 12ರಲ್ಲಿ ಸ್ಥಾನಪಡೆದಿವೆ. ಬಂಡೀಪುರ ಶೇ. 93.18 ಅಂಕಗಳೊಂದಿಗೆ ಸಾತ್ಪುರ ಹುಲಿ ಸಂರಕ್ಷಿತ ಪ್ರದೇಶದೊಂದಿಗೆ ಎರಡನೇ ಸ್ಥಾನವನ್ನು ಹಂಚಿಕೊಂಡಿದೆ.

ಪೆರಿಯಾರ್ ಹುಲಿ ಸಂರಕ್ಷಿತ ಪ್ರದೇಶ ಶೇ. 94.38 ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿದ್ದರೆ, ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ಶೇ. 92.42 ಅಂಕಗಳೊಂದಿಗೆ ನಾಲ್ಕನೇ ಸ್ಥಾನವನ್ನು ಪಡೆದುಕೊಂಡಿದೆ. ಕನ್ಹಾ ಶೇ. 91.67 ಅಂಕಗಳೊಂದಿಗೆ ಐದನೇ ಸ್ಥಾನ ಪಡೆದಿದೆ. ಹುಲಿ ಸಂರಕ್ಷಿತ ಪ್ರದೇಶಗಳನ್ನು ಅಂಶವಾರು ವಿಶ್ಲೇಷಿಸಲಾಗಿದೆ ಎಂದು ವರದಿ ತೋರಿಸಿದೆ.

## ಅಮುಲ್ ಮಾರಾಟಕ್ಕೆ ಕರವೇ ಆಕ್ರೋಶ: ಅಮುಲ್ ಉತ್ಪನ್ನಗಳ ಬೀದಿಗೆಸೆದು ಪ್ರತಿಭಟನೆ



ಬೆಂಗಳೂರು: ಕರ್ನಾಟಕದಲ್ಲಿ ಅಮುಲ್ ಹಾಲು–ಮೊಸರು ಮಾರಾಟ ಹಾಗೂ ನಂದಿನಿಯನ್ನು ಅಮುಲ್ ಜೊತೆಗೆ ವಿಲೀನಗೊಳಿಸಲು ಕೇಂದ್ರ ಸರಕಾರ ಹುನ್ನಾರ ನಡೆಸುತ್ತಿದೆ ಎಂದು ಆರೋಪಿಸಿ ಇಂದು ಕರ್ನಾಟಕ ರಕ್ಷಣಾ ವೇದಿಕೆ ಮೈಸೂರು ಬ್ಯಾಂಕ್ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ಹಾಲು, ಮೊಸರು, ತುಪ್ಪ, ಬೆಣ್ಣೆ, ಚೀಝ್ ಇತ್ಯಾದಿ ಅಮುಲ್ ಉತ್ಪನ್ನಗಳನ್ನು ಬೀದಿಗೆಸೆದು ಪ್ರತಿಭಟನೆ ನಡೆಸಿದ ಕರವೇ ಕಾರ್ಯಕರ್ತರು, ಯಾವುದೇ ಕಾರಣಕ್ಕೂ ಅಮುಲ್ ಹಾಲು–ಮೊಸರು ವ್ಯಾಪಾರಕ್ಕೆ ಅವಕಾಶ ನೀಡುವುದಿಲ್ಲ ಎಂದು ಎಚ್ಚ–ರಿಸಿದರು.

ಟಿ.ಎ.ನಾರಾಯಣಗೌಡರ ನೇತೃತ್ವದ ಕರ್ನಾಟಕ ರಕ್ಷಣಾ ವೇದಿಕೆಯ ನೂರಾರು ಕಾರ್ಯಕರ್ತರು ಸೋಮವಾರ ಬೆಳಗ್ಗೆ ಮೈಸೂರು ಬ್ಯಾಂಕ್ ವೃತ್ತದ ಬಳಿ ನೆರೆದು ಅಮುಲ್ ವಿರುದ್ಧ ಘೋಷಣೆಗಳನ್ನು ಕೂಗಿದರು. ಈ ಸಂದರ್ಭದಲ್ಲಿ ಮಾತನಾಡಿದ ಕರವೇ ರಾಜ್ಯ ಉಪಾಧ್ಯಕ್ಷ ದಾ.ಪಿ. ಆಂಜನಪ್ಪ, ಅಮುಲ್ ಸಂಸ್ಥೆ ಕನ್ನಡಿಗರ ಭಾವನೆಗಳೊಂದಿಗೆ ಆಟವಾಡುತ್ತಿದೆ. ಕನ್ನಡಿಗರು ಕಟ್ಟಿದ ಹೆಮ್ಮೆಯ ಸಂಸ್ಥೆ ಕೆಎಂ–ಎಫ್. ಅದನ್ನು ನಾಶಪಡಿಸಲು ಯಾರಿಗೂ ಅವಕಾಶ ನೀಡುವುದಿಲ್ಲ ಎಂದು ಹೇಳಿದರು.

ಕೇಂದ್ರ ಸರಕಾರ ನಂದಿನಿಯನ್ನು ಅಮುಲ್ ನೊಂದಿಗೆ ವಿಲೀನಗೊಳಿಸಲು ಯತ್ನಿಸುತ್ತಿದೆ. ಇಂಥದ್ದೇನಾದರೂ ನಡೆದರೆ ಕರ್ನಾಟಕದ ಜನತೆ ದಂಗೆ ಏಳುತ್ತಾರೆ ಎಂದು ಎಚ್ಚ–ರಿಸಿದರು.

ಕರ್ನಾಟಕ ರಕ್ಷಣಾ ವೇದಿಕೆ ಯುವ ಘಟಕದ ರಾಜ್ಯಾಧ್ಯಕ್ಷ ಟಿ.ಎ.ಧರ್ಮರಾಜ್ ಗೌಡ ಮಾತನಾಡಿ, ಅಮುಲ್ ಹಠಮಾ–ರಿತನ ಮುಂದುವರಿಸಿ ಹಾಲು–ಮೊಸರು ವ್ಯಾಪಾರ ಮುಂದುವರಿಸಿದರೆ ಕರ್ನಾಟಕದಲ್ಲಿ ಅಮುಲ್ ನ ಎಲ್ಲ ಉತ್ಪನ್ನಗಳಿಗೂ ಬಹಿಷ್ಕಾರ ಹಾಕಬೇಕಾಗುತ್ತದೆ. ಅಮುಲ್ ಐಸ್ ಕ್ರೀಂ ನಿಂದ ಹಿಡಿದು ಬಿಸ್ಕೆಟ್ ವರೆಗೆ ಯಾವ ಉತ್ಪನ್ನವನ್ನೂ ಮಾರಾಟ ಮಾಡಲು ಬಿಡುವುದಿಲ್ಲ. ಹೀಗಾಗಿ ಅಮುಲ್ ಕೂಡಲೇ ಹಾಲು, ಮೊಸರು ವ್ಯಾಪಾರ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆ ಸಂದರ್ಭದಲ್ಲಿ ಅಮುಲ್ ಪ್ರತಿ–ಕೃತಿ ದಹನ ಮಾಡಲು ಕಾರ್ಯಕರ್ತರು ಮುಂದಾದಾಗ ಪೊಲೀಸರು ಅಡ್ಡಿಪಡಿಸಿದರು. ಈ ಸಂದರ್ಭದಲ್ಲಿ ಕರವೇ ಕಾರ್ಯಕರ್ತರು ಮತ್ತು ಪೊಲೀಸರ ನಡುವೆ ಮಾತಿನ ಚಕಮಕಿ ನಡೆಯಿತು. ಪೊಲೀಸರ ವಿರೋಧದ ನಡುವೆಯೂ ಪ್ರತಿಕೃತಿ ದಹನಕ್ಕೆ ಮುಂದಾದ ಕರವೇ ಕಾರ್ಯಕರ್ತರನ್ನು ಬಂಧಿಸಲಾಯಿತು.

ಪೊಲೀಸರ ದೌರ್ಜನ್ಯದ ಕುರಿತು ಪ್ರತಿಕ್ರಿಯೆ ನೀಡಿದ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಸಣ್ಣೀರಪ್ಪ, ನೂರಾರು ಕರವೇ ಕಾರ್ಯಕರ್ತರನ್ನು ಹೇಡಿ ಸರಕಾರ ಪೊಲೀಸರನ್ನು ಮುಂದೆ ಬಿಟ್ಟು ಬಂಧಿಸಿದೆ. ನಿಮ್ಮ ದೌರ್ಜನ್ಯವನ್ನು ಸವಾಲಾಗಿ ಸ್ವೀಕರಿಸಲಿದ್ದೇವೆ. ರಾಜ್ಯದ ಮೂಲೆಮೂಲೆಗಳಲ್ಲೂ ಹೋರಾಟ ನಡೆಯಲಿದೆ. ಅದೆಷ್ಟು ಪೊಲೀಸರನ್ನು ಕಳಿಸುತ್ತೀರೋ ಕಳಿಸಲಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪ್ರತಿಭಟನೆಯಲ್ಲಿ ಕರವೇ ಮುಖಂಡರಾದ ಶ್ವೇತಾ ಮೋಹನ್, ಗೋಮೂರ್ತಿ ಯಾದವ್, ವೀರಭದ್ರ, ಕುಮಾರ್ , ಕೆ.ಪಿ. ನರಸಿಂಹ, ಕಾರ್ತಿಕ್, ಲಕ್ಷ್ಮಿ ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು.

## ಚುನಾವಣಾ ಅಧಿಕಾರಿಗಳಿಂದ ಹೆಚ್ಡಿಕೆ ಹೆಲಿಕಾಪ್ಟರ್ ತಪಾಸಣೆ



ಕೋಲಾರ: ರಾಜ್ಯದಲ್ಲಿ ಮಾದರಿ ನೀತಿ ಸಂಹಿತೆ ಜಾ–ರಿಯಲ್ಲಿದ್ದು, ಚುನಾವಣಾ ಅಧಿಕಾರಿಗಳು ರಾಜಕೀಯ ನಾಯಕರ ಮತ್ತು ಬೆಂಬಲಿಗರ ವಾಹನಗಳ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ.

ಪಂಚರತ್ನ ಯಾತ್ರೆ ಸಂಬಂಧ ಜಿಲ್ಲೆಯ ಮುಳಬಾಗಿಲು ತಾಲೂಕಿನ ಶಿನಗೇನಹಳ್ಳಿ ಹೆಲಿಪ್ಯಾಡ್ಗೆ ಆಗಮಿಸಿದ ಮಾಜಿ ಮುಖ್ಯಮಂತ್ರಿ ಹೆಚ್. ಡಿ ಕುಮಾರಸ್ವಾಮಿಯವರ ಹೆಲಿಕಾಪ್ಟರ್ನ್ನು ಚುನಾವಣಾ ಅಧಿಕಾರಿಗಳು ತಪಾಸಣೆ ಮಾಡಿದ್ದಾರೆ.

ನಂತರ ಹೆಚ್.ಡಿ ಕುಮಾರಸ್ವಾಮಿ ಅಲಂಗೂರಿಗೆ ತೆರಳಿ ಮಾಜಿ ಸಚಿವ ದಿವಂಗತ ಶ್ರೀನಿವಾಸ್ ಅವರ ಸಮಾಧಿಗೆ ಪೂಜೆ ಸಲ್ಲಿಸಿದರು. ಮುಳಬಾಗಿಲು ಜೆಡಿಎಸ್ ಅಭ್ಯರ್ಥಿ ಸಮೃದ್ಧಿ ಮಂಜುನಾಥ್ ಸೇ–ರಿದಂತೆ ಹಲವು ಮುಖಂಡರು ಸಾಥ್ ನೀಡಿದರು.

## ಲಾರಿ ಕೆಳಗೆ ಬಿದ್ದು ಸಾವನ್ನಪ್ಪಿದ ಅಪ್ರಾಪ್ತ ಭಗ್ನಪ್ರೇಮಿ

ಚಿಕ್ಕಬಳ್ಳಾಪುರ: ಅಪ್ರಾಪ್ತ ಭಗ್ನಪ್ರೇಮಿಯೊಬ್ಬ ಲಾರಿ ಕೆಳಗೆ ಬಿದ್ದು ಸಾವನ್ನಪ್ಪಿರುವ ಘಟನೆ ರಾಷ್ಟ್ರೀಯ ಹೆದ್ದಾರಿ 44 ರ ಯರ್ರಲಕ್ಕೇನಹಳ್ಳಿ ಕ್ರಾಸ್ ಬಳಿ ನಡೆದಿದೆ.

ಚಿಕ್ಕಬಳ್ಳಾಪುರ ಜಿಲ್ಲೆ ಗುಡಿಬಂಡೆ ತಾಲೂಕಿನ ಬೀಚಗಾನಹಳ್ಳಿ ಗ್ರಾಮದ ಮನೋಹರ್ (17) ಮೃತ ದುರ್ದೈವಿ. ಕಸ್ತೂರ ಬಾ ಹಾಸ್ಟೆಲ್ ಆರ್.ಎಂ.ಎಸ್.ಎ. ವಸತಿ ಶಾಲೆಯ ವಿದ್ಯಾರ್ಥಿನಿಯನ್ನು ಈ ಅಪ್ರಾಪ್ತ ಪ್ರೀತಿಸುತ್ತಿದ್ದ. 10ನೇ ತರಗತಿ ವಿದ್ಯಾರ್ಥಿನಿಯ ಜೊತೆ ಲವ್ವಿ ಡವ್ವಿ ಶುರುವಚ್ಚಿಕೊಂಡಿದ್ದ ಮನೋಹರ್ ಸಾವಿಗೂ ಮುನ್ನ ಬ್ಲೇಡ್ ನಿಂದ ಕೈ ಕೊಯ್ದುಕೊಂಡಿದ್ದಾನೆ.

ಈ ಮಧ್ಯೆ, ಸಾವಿನ ಬಗ್ಗೆ ಅನುಮಾನ ಇದ್ದು, ತನಿಖೆ ನಡೆಸಬೇಕೆಂದು ಪೋಷಕರು ಒತ್ತಾಯಿಸಿದ್ದಾರೆ. ಇನ್ನು ಲಾರಿ ಕೆಳಗೆ ಸಿಕ್ಕಿದ ಅಪ್ರಾಪ್ತನ ಶವ ಪೀಸ್ ಪೀಸ್ ಆಗಿದೆ. ಗುಡಿಬಂಡೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ನಂದಿನಿ ಉತ್ಪನ್ನಗಳ ಬಗ್ಗೆ ವಿಪಕ್ಷಗಳು ರಾಜಕೀಯ ಮಾಡುವುದನ್ನು ನಿಲ್ಲಿಸಲಿ: ಸಿಎಂ ಬೊಮ್ಮಾಯಿ



ನವದೆಹಲಿ: ನಂದಿನಿ ಉತ್ಪನ್ನಗಳ ಬಗ್ಗೆ ವಿಪಕ್ಷಗಳಾದ ಕಾಂಗ್ರೆಸ್–ಜೆಡಿ–ಎಸ್ ಜನರಲ್ಲಿ ತಪ್ಪು ತಿಳುವಳಿಕೆಯನ್ನು ಹಬ್ಬುವಂತೆ ಮಾಡುತ್ತಿವೆ. ಈ ಮೂಲಕ ಜನರು, ರೈತರು ಆತಂಕಕ್ಕೀಡಾಗುವಂತೆ ಮಾಡುತ್ತಿವೆ. ರಾಜಕೀಯ ದುರುದ್ದೇಶಕ್ಕೆ ಈ ಮಟ್ಟಕ್ಕೆ ಇಳಿಯುವುದು ಸರಿಯಲ್ಲ. ಇದನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದು ಸಿಎಂ ಬಸವರಾಜ್ ಬೊಮ್ಮಾಯಿ ತಿಳಿಸಿದ್ದಾರೆ.

ನವ ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಬೊಮ್ಮಾಯಿ, ನಮ್ಮ ನಂದಿನಿ ಉತ್ಪನ್ನಕ್ಕೆ ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೇಡಿಕೆಯಿದ್ದು, ಎಲ್ಲಾ ರಾಜ್ಯಗಳಲ್ಲಿಯೂ ಸಹ ದೊರೆಯುತ್ತಿದೆ. ಹೊರ ದೇಶಗಳಿಗೂ ರಫ್ತಾಗುತ್ತಿದೆ. 2018ರಲ್ಲಿ ಪ್ರತಿದಿನ 84 ಲಕ್ಷ ಲೀಟರ್ ಹಾಲನ್ನು ಉತ್ಪಾದಿಸಲಾಗುತ್ತಿತ್ತು, ಪ್ರಸ್ತುತ 94 ಲಕ್ಷ ಲೀಟರ್ ಹಾಲನ್ನು ಉತ್ಪಾದಿಸಲಾಗುತ್ತಿದೆ. ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಾಗುತ್ತಿದೆ. ಉತ್ಪಾದನೆ ಹೆಚ್ಚಾಗುತ್ತಿದೆ. ಹೀಗಿರುವಾಗ ವಿಪಕ್ಷಗಳು ಅನಗತ್ಯವಾಗಿ ಸುಳ್ಳು ಆರೋಪಗಳನ್ನು ಮಾಡಿ, ತಪ್ಪು ಮಾಹಿತಿ ನೀಡುತ್ತಿರುವುದು ಸರಿಯಲ್ಲ ಎಂದು ಗುಡುಗಿದರು.

ವಿಪಕ್ಷಗಳ ಮಾತನನ್ನು ಜನರು ನಂಬಬಾರದು. ಮಾರುಕಟ್ಟೆಗೆ ಅಮೂಲ್ ಮಾತ್ರವಲ್ಲ, ಬೇರೆ ಬೇರೆ ಉತ್ಪನ್ನಗಳೂ ಬರುತ್ತಿವೆ. ಆದರೂ ನಮ್ಮದೇ ಬ್ರ್ಯಾಂಡ್ ಆಗಿರುವ ನಂದಿನಿ ಉತ್ಪನ್ನ ಬೇರೆ ಎಲ್ಲಾ ಉತ್ಪನ್ನಗಳನ್ನೂ ಹಿಮ್ಮೆಟ್ಟಿಸಿ ನಿಂತಿದೆ. ಇನ್ಮುಂದೆಯೂ ನಿಲ್ಲುತ್ತದೆ. ಈ ವಿಚಾರದಲ್ಲಿ ವಿಪಕ್ಷಗಳು ರಾಜಕಾರಣ ಮಾಡುವುದನ್ನು ಬಿಡಬೇಕು ಎಂದರು.

## ಸಿಆರ್‌ಪಿಎಫ್ ನೇಮಕಾತಿಗೆ ಸ್ಥಳೀಯ ಭಾಷೆಯಲ್ಲಿಯೇ ಮರುಪರೀಕ್ಷೆ ನಡೆಸಿ: ಎಚ್‌ಡಿಕೆ



ಬೆಂಗಳೂರು: ಕೇಂದ್ರೀಯ ಮೀಸಲು ರಕ್ಷಣಾ ಪಡೆ (ಸಿಆರ್‌ಪಿ–ಎಫ್) ನೇಮಕಾತಿ ಪರೀಕ್ಷೆಯನ್ನು ಸ್ಥಳೀಯ ಭಾಷೆಯಲ್ಲಿ ಬರೆಯಲು ಅಭ್ಯರ್ಥಿಗಳಿಗೆ ಅವಕಾಶ ಕಲ್ಪಿಸದ ಅಧಿಕಾರಿಗಳ ವಿರುದ್ಧ ವಾಗ್ದಾಳಿ ನಡೆಸಿರುವ ಜೆಡಿಎಸ್, ಮರು ಪರೀಕ್ಷೆ ನಡೆಸಬೇಕು ಎಂದು ಸೋಮವಾರ ಒತ್ತಾಯಿಸಿದೆ.

ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದು, ಕೇಂದ್ರ ಸರ್ಕಾರ ಮತ್ತೊಮ್ಮೆ ಕನ್ನಡಿಗರಿಗೆ ಮೋಸ ಮಾಡಿದೆ. ಸಿಆರ್ಪಿಎಫ್‌ಗೆ ಭಾನುವಾರ ನಡೆದ ಕಂಪ್ಯೂಟರ್ ಪರೀಕ್ಷೆಯಲ್ಲಿ ಸ್ಥಳೀಯ ಭಾಷೆಗೆ ಅವಕಾಶವಿರಲಿಲ್ಲ. ಹಿಂದಿ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಮಾತ್ರ ಪರೀಕ್ಷೆಗಳನ್ನು ನಡೆಸಲು ಅವಕಾಶ ಕಲ್ಪಿಸಲಾಗಿದೆ. ಇದು ಅತ್ಯಂತ ಖಂಡನೀಯ ಎಂದು ಹೇಳಿದರು.

ಈ ಕುರಿತು ಸರಣಿ ಟ್ವೀಟ್ ಮಾಡಿರುವ ಅವರು, 9212 ಹುದ್ದೆಗಳಿಗೆ ಈ ಪರೀಕ್ಷೆ ನಡೆಸಲಾಗಿದ್ದು, ಅದರಲ್ಲಿ ಕರ್ನಾಟಕದ 466 ಹುದ್ದೆಗಳೂ ಸೇರಿವೆ. ದುರಂತವೆಂದರೆ, ಇಷ್ಟು ಹುದ್ದೆಗಳನ್ನು ಬಯಸುವ ಅಭ್ಯರ್ಥಿಗಳು ಹಿಂದಿ, ಇಂಗ್ಲಿಷ್‌ನಲ್ಲಿ ಪರೀಕ್ಷೆ ಬರೆದಿದ್ದಾರೆ. ಈ ಭಾಷೆಯಲ್ಲೇ ಬರೆಯುವ ಅನಿವಾರ್ಯ ಸೃಷ್ಟಿಸಲಾಗಿದೆ. ಮಾತೃಭಾಷೆಯಲ್ಲಿ ಬರೆಯುವುದನ್ನು ನಿರಾಕರಿಸುವುದು ಎಂದರೆ ಸಂವಿಧಾನಕ್ಕೆ ಎಸಗಿದ ಅಪಚಾರ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೇಂದ್ರ ಸರ್ಕಾರ ತನ್ನ ಸುಪರ್ದಿಯಲ್ಲಿ ನಡೆಸುವ ಎಲ್ಲ ನೇಮಕಾತಿ ಪರೀಕ್ಷೆಗಳನ್ನು ಹಿಂದಿ, ಇಂಗ್ಲಿಷಿನಲ್ಲೇ ನಡೆಸುತ್ತಿದೆ. ಕೇವಲ ಹಿಂದಿ ಕೇಂದ್ರಿತ ನೇಮಕಾತಿ ಪ್ರಕ್ರಿಯೆ ಇತರೆ ಭಾಷಿಕರನ್ನು ಉದ್ಯೋಗ ವಂಚಿತರನ್ನಾಗಿಸುವುದು ಮಾತ್ರವಲ್ಲ, ಅನ್ಯಭಾಷೆಗಳನ್ನು ಹತ್ತಿಕ್ಕಿ ಹಿಂದಿ ಹೇರಿಕೆ ಮಾಡುವುದಷ್ಟೇ ದುರುದ್ದೇಶ. ಇದು ಸ್ಪಷ್ಟ ಎಂದಿದ್ದಾರೆ.

ಈ ಪರೀಕ್ಷೆಯಲ್ಲಿ ಅನೇಕ ಪ್ರಶ್ನೆಗಳು ಹಿಂದಿ ಭಾಷೆಗೆ ಸಂಬಂಧಿಸಿದವು. ಅಲ್ಲಿಗೆ, ಹಿಂದಿಯೇತರ ಅಭ್ಯರ್ಥಿಗಳು ಈ ನೇಮಕಾತಿಯಲ್ಲಿ ಆಯ್ಕೆ ಆಗಲೇಬಾರದು ಎಂದು, ಉದ್ದೇಶಪೂರ್ವಕವಾಗಿಯೇ ಹೀಗೆ ಮಾಡಲಾಗಿದೆ. ಒಕ್ಕೂಟ ವ್ಯವಸ್ಥೆಗೆ ಇದು ಕೇಂದ್ರವೇ ಕೊಟ್ಟ ಮಾರಣಾಂತಿಕ ಪೆಟ್ಟು. ತಮ್ಮ ರಾಜ್ಯಗಳಲ್ಲಿ ಉದ್ಯೋಗ ಪಡೆಯಲು ಅನ್ಯಭಾಷೆಯಲ್ಲಿ ಪರೀಕ್ಷೆ ಬರೆಯಬೇಕಾದ ಕರ್ಮ ದಕ್ಷಿಣ ಭಾರತ ರಾಜ್ಯಗಳ ಜನರದ್ದು. ಕನ್ನಡಿಗರೂ ಸೇರಿ ದಕ್ಷಿಣದ ಎಲ್ಲ ಭಾಷಿಕರು ಈ ಬಗ್ಗೆ ವಿರೋಧ ಮಾಡುತ್ತಲೇ ಇದ್ದರೂ ಕೇಂದ್ರ ಸರ್ಕಾರ ಹಿಂದಿ ಹೇರಿಕೆಯನ್ನು ಮುಂದುವರಿಸಿದೆ ಎಂದು ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಮುಲಾಜಿಲ್ಲದೆ ಸಿಆರ್ಪಿಎಫ್ ನೇಮಕಾತಿಯ ಮರು ಪರೀಕ್ಷೆ ನಡೆಸಬೇಕು ಹಾಗೂ ಕನ್ನಡ ಸೇರಿ ದೇಶದ ಎಲ್ಲ ಭಾಷೆಗಳಲ್ಲೂ ಬರೆಯಲು ಅಭ್ಯರ್ಥಿಗಳಿಗೆ ಅವಕಾಶ ನೀಡಬೇಕು. ಇಲ್ಲವಾದರೆ, ಈ ತಾರತಮ್ಯ ಹಾಗೂ ಹಿಂದಿ ಹೇರಿಕೆ ಇನ್ನೊಂದು ದೊಡ್ಡ ಹೋರಾಟಕ್ಕೆ ನಾಂದಿ ಆದೀತು ಎಂದು ಕುಮಾರಸ್ವಾಮಿ ಎಚ್ಚ–ರಿಸಿದ್ದಾರೆ.

## ಇಂದು ರಾಹುಲ್ ಗಾಂಧಿ ವಯನಾಡ್‌ಗೆ



ನವದೆಹಲಿ: ಕ್ರಿಮಿನಲ್ ಮಾನಹಾನಿ ಪ್ರಕರಣದಲ್ಲಿ ಶಿಕ್ಷೆಗೆ ಗು–ರಿಯಾಗಿ, ಲೋಕಸಭೆ ಸದಸ್ಯತ್ವದಿಂದ ಅನರ್ಹ ಗೊಂಡಿರುವ ರಾಹುಲ್ ಗಾಂಧಿ ಅವರು ತಮ್ಮ ಕ್ಷೇತ್ರ ವಯನಾಡ್‌ನಲ್ಲಿ ಏ. 11ರಂದು ರೋಡ್ ಶೋ ನಡೆಸಲಿದ್ದಾರೆ. ಅನರ್ಹಗೊಂಡ ಬಳಿಕ ಮೊದಲ ಸಲ ಅವರು ವಯನಾಡ್‌ಗೆ ಆಗಮಿಸುತ್ತಿರುವುದರಿಂದ ಅದ್ದೂರಿ ಸ್ವಾಗತ ಕೋರಲು ಕೇರಳ ಕಾಂಗ್ರೆಸ್ ಭಾರಿ ತಯಾರಿ ನಡೆಸಿದೆ. ಮೋದಿ ಸಮುದಾಯದ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ ಪ್ರಕರಣದಲ್ಲಿ ರಾಹುಲ್ ಗಾಂಧಿ ದೋಷಿ ಎಂದು ಸೂರತ್ ನ್ಯಾಯಾಲಯವು ಮಾರ್ಚ್ 23ರಂದು ತೀಪು ನೀಡಿತ್ತು. 2 ವರ್ಷ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಲಾಗಿದೆ. ಇದರ ಬೆನ್ನಲ್ಲೇ ಅವರನ್ನು ಲೋಕಸಭೆ ಸದಸ್ಯತ್ವದಿಂದ ಅನರ್ಹಗೊಳಿಸಲಾಗಿತ್ತು. ಸದ್ಯ ಜಾಮೀನಿನ ಮೇಲೆ ಹೊರಗಿರುವ ರಾಹುಲ್, ಸೂರತ್ ನ್ಯಾಯಾಲಯದ ತೀಪು ಪ್ರಶ್ನಿಸಿ ಸೆಷನ್ಸ್ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿದ್ದಾರೆ. ಅರ್ಜಿಯ ವಿಚಾರಣೆಯು ಏಪ್ರಿಲ್ 13ರಂದು ನಡೆಯಲಿದೆ.

# ಕನ್ನಡ ಭಾಷೆಯಲ್ಲೂ ಸಿಆರ್‌ಪಿಎಫ್ ಪರೀಕ್ಷೆ ಬರೆಯಲು ಅವಕಾಶ ನೀಡಿ: ಸಿದ್ದರಾಮಯ್ಯ ಆಗ್ರಹ

ಬೆಂಗಳೂರು: ಕನ್ನಡ ಭಾಷೆಯಲ್ಲೂ CRPF ಪರೀಕ್ಷೆ ಬರೆಯಲು ಅವಕಾಶ ನೀಡಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕರ್ನಾಟಕ ಮಾಜಿ ಸಿಎಂ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಪ್ರಕಟನೆ ಹೊರಡಿಸಿರುವ ಸಿದ್ದರಾಮಯ್ಯ, ಕೇಂದ್ರ ಮೀಸಲು ಪೊಲೀಸ್ ಪಡೆಯ ನೇಮಕಾತಿ ಪರೀಕ್ಷೆಯಲ್ಲಿ ಭಾಷೆಯ ಸಮಸ್ಯೆಯಿಂದಾಗಿ ಜ್ಞಾನ, ಅರ್ಹತೆ ಇರುವ ಕನ್ನಡಿಗರು ಉದ್ಯೋಗ ವಂಚಿತರಾಗುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಕೂಡಲೇ ಮಧ್ಯಪ್ರವೇಶಿಸಿ ಈ ಅನ್ಯಾಯವನ್ನು ಸರಿಪಡಿಸಬೇಕು ಎಂದು ವಿಪಕ್ಷ ನಾಯಕರಾದ ಸಿದ್ದರಾಮಯ್ಯ ಅವರು ಆಗ್ರಹಿಸಿದ್ದಾರೆ.

ಕೇಂದ್ರ ಮೀಸಲು ಪೊಲೀಸ್ ಪಡೆಯ ನೇಮಕಾತಿ ಪರೀಕ್ಷೆಯನ್ನು ಹಿಂದಿ ಮತ್ತು ಇಂಗ್ಲೀಷ್ ಭಾಷೆಯಲ್ಲಿ ಬರೆಯುವುದನ್ನು ಕಡ್ಡಾಯಗೊಳಿಸಿರುವುದನ್ನು ತಕ್ಷಣ ಸಡಿಲಿಸಿ, ಕನ್ನಡ ಭಾಷೆಯಲ್ಲಿಯೂ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಟ್ಟು ಈ ಅನ್ಯಾಯವನ್ನು ಸರಿಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಭಾಷೆಯೇ ಜ್ಞಾನ ಅಲ್ಲ, ಅದು ಜ್ಞಾನದ ಸಂವಹನ ಸಾಧನ ಅಷ್ಟೇ. ಕನ್ನಡ ಭಾಷಾ ಮಾಧ್ಯಮದಲ್ಲಿ ಓದಿದ ನಮ್ಮ ಯುವಜನರು ಜ್ಞಾನಿಗಳಾಗಿದ್ದರೂ



ಭಾಷೆಯ ಸಮಸ್ಯೆಯಿಂದಾಗಿ ಕೇಂದ್ರ ಸರ್ಕಾರ ನಡೆಸುವ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುತ್ತಿದ್ದಾರೆ. ಇದು ಅನ್ಯಾಯ' ಎಂದು ದೂರಿದ್ದಾರೆ. ಅಲ್ಲದೆ 'ರಾಜ್ಯದ ಬಿಜೆಪಿ ಸರ್ಕಾರದ ಭ್ರಷ್ಟಾಚಾರದಿಂದಾಗಿ ರಾಜ್ಯದಲ್ಲಿ ಮತ್ತು ಕೇಂದ್ರದ ಬಿಜೆಪಿ ಸರ್ಕಾರದ ಭಾಷಾ ನೀತಿಯಿಂದಾಗಿ ಕೇಂದ್ರದಲ್ಲಿ ಕನ್ನಡಿಗ ಯುವಜನರು ಉದ್ಯೋಗ ವಂಚಿತರಾಗುತ್ತಿದ್ದಾರೆ. ಇದರಿಂದ ರಾಜ್ಯದಲ್ಲಿ ನಿರುದ್ಯೋಗದ ಪ್ರಮಾಣ ಹೆಚ್ಚಾಗುತ್ತಿದೆ, ಯುವಜನರ ಭವಿಷ್ಯ ಮಂಕಾಗುತ್ತಿದೆ' ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಕೇಂದ್ರದ ಬಿಜೆಪಿ ಸರ್ಕಾರ ರಾಜ್ಯ ಭಾಷೆಗಳನ್ನು ಮೂಲೆಗೆ ತಳ್ಳಿ ಹಿಂದಿ ಭಾಷೆಯನ್ನು ನಮ್ಮ ತಲೆ ಮೇಲೆ ಹೇರುವ ಪ್ರಯತ್ನವನ್ನು ನಿರಂತರವಾಗಿ ಮಾಡುತ್ತಾ ಬಂದಿದೆ. ಉದ್ಯಮ, ಉದ್ಯೋಗ, ಶಿಕ್ಷಣ ಹೀಗೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ಹಿಂದಿ ಭಾಷೆಯ ಯಜಮಾನಿಕೆ ಹೆಚ್ಚಾಗುತ್ತಿದೆ.

ಇದನ್ನು ಸಹಿಸಲು ಸಾಧ್ಯ ಇಲ್ಲ' ಎಂದು ಎಚ್ಚರಿಸಿದ್ದಾರೆ. ಅಂತೆಯೇ 'ಈಗಲೂ ಕಾಲ ಮಿಂಚಿಲ್ಲ ಪ್ರಧಾನಿ ನರೇಂದ್ರ ಮೋದಿ ಅವರು ತಕ್ಷಣ ಮಧ್ಯೆ ಪ್ರವೇಶಿಸಿ ಸಿಆರ್‌ಪಿಎಫ್ ಪರೀಕ್ಷೆಗಳನ್ನು ಕನ್ನಡವೂ ಸೇರಿದಂತೆ ರಾಜ್ಯ ಭಾಷೆಗಳಲ್ಲಿ ಬರೆಯಲು ಅನುಕೂಲ ಮಾಡಿಕೊಡಬೇಕು.

ರಾಜ್ಯದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಮತ್ತು ಬಿಜೆಪಿ ಸಂಸದರು ಇದಕ್ಕಾಗಿ ಪ್ರಧಾನಿಗಳ ಮೇಲೆ ಒತ್ತಡ ಹೇರಬೇಕು' ಎಂದು ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.

# ದಾಖಲೆ ಇಲ್ಲದ 2.10 ಕೋಟಿ ರೂ. ವಶ



**ಬಾಗಲಕೋಟೆ:** ದಾಖಲೆ ಇಲ್ಲದೆ ಸಾಗಾಟ ಮಾಡುತ್ತಿದ್ದ 2.10 ಕೋಟಿ ರೂ. ಜಿಲ್ಲೆಯ ಜಮಖಂಡಿ ತಾಲೂಕಿನ ಹುನ್ನೂರು ಚೆಕ್ಪೋಸ್ಟ್‌ನಲ್ಲಿ ಜಪ್ತಿ ಮಾಡಲಾಗಿದೆ.

ಮುಧೋಳದಿಂದ ಅಥಣಿ ಕಡೆಗೆ ತೆರಳುತ್ತಿದ್ದ ಬೊಲೆರೊ ವಾಹನದಲ್ಲಿ ಬಾರಿ ಮೊತ್ತದ ಹಣ ರವಾನೆ ಮಾಡಲಾಗುತ್ತಿತ್ತು. ಸಹಕಾರಿ ಬ್ಯಾಂಕ್ನ ಬೇರೆ ಶಾಖೆಗೆ ಹಣ ಸಾಗಿಸಲಾಗುತ್ತಿದೆ ಎಂದು ಮಾಹಿತಿ ನೀಡಿದ ವಾಹನದಲ್ಲಿದ್ದ ಇಬ್ಬರು ವ್ಯಕ್ತಿಗಳನ್ನು ಸಹ ವಶಕ್ಕೆ ಪಡೆದು ವಿಚಾರಣೆ ಮಾಡಲಾಗುತ್ತಿದೆ.

# ಕೆಎಂಎಫ್ ಖಾಸಗೀಕರಣಗೊಳಿಸಲು ಬಿಜೆಪಿ ಸರ್ಕಾರ ಹುನ್ನಾರ: ಡಿಕೆ ಸುರೇಶ್ ಗಂಭೀರ ಆರೋಪ



ಬೆಂಗಳೂರು: ಕೆಎಂಎಫ್ ಖಾಸಗೀಕರಣಗೊಳಿಸಲು ಬಿಜೆಪಿ ಸರ್ಕಾರದ ಹುನ್ನಾರ ನಡೆಸಿದೆ ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಿಕೆ ಸುರೇಶ್ ಗಂಭೀರ ಆರೋಪ ಮಾಡಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಗುಜರಾತ್ನಿಂದ ಬರುವ ಆದೇಶದ ಮೇರೆಗೆ ಇಲ್ಲಿ ಆಡಳಿತ ನಡೆಸುವ ಬಿಜೆಪಿಯವರು ಕೆಎಂಎಫ್ ಸೇ–ರಿದಂತೆ ನಾಡಿನ ಹೆಮ್ಮೆಯ ಸಂಸ್ಥೆಗಳನ್ನು ಮುಚ್ಚಿಸಲು ಹಲವು ರೀತಿಯ ಹುನ್ನಾರಗಳನ್ನು ನಡೆಸುತ್ತಿದ್ದಾರೆ. ನಾಡಿನ ರೈತರು ರಾಷ್ಟ್ರದಲ್ಲೇ ವಿಶಿಷ್ಠ ಗೌರವ ಸಂಪಾದಿಸಿದ್ದಾರೆ. ಇಲ್ಲಿ ಅತ್ಯುತ್ತಮ ಸಹಕಾರ ಹಾಗೂ ಬ್ಯಾಂಕಿಂ–ಗ್ ವ್ಯವಸ್ಥೆ ಇದೆ. ದೇಶದಲ್ಲೇ ಹೆಚ್ಚು ಸ್ವತಂತ್ರ ಬ್ಯಾಂಕ್ಗಳು ರಾಜ್ಯದಲ್ಲೇ ಇದ್ದವು. ಕರ್ನಾಟಕ ಬ್ಯಾಂಕ್, ಕಾರ್ಪೋರೇಷನ್ ಬ್ಯಾಂಕ್, ಸಿಂಡಿಕೇಟ್ ಬ್ಯಾಂಕ್, ಕೆನರಾ ಬ್ಯಾಂಕ್, ವಿಜಯಾ ಬ್ಯಾಂಕ್, ಎಸ್ಬಿಎಂ ಸೇರಿ ಅನೇಕ ಸಂಸ್ಥೆಗಳು ಲಾಭದಲ್ಲಿದ್ದವು. ಬ್ಯಾಂಕ್ಗಳ ವಿಲೀನ ಪ್ರಕ್ರಿಯೆ ಮೂಲಕ ಅವುಗಳನ್ನು ಮುಚ್ಚಿಸಲಾಗಿದೆ ಎಂದರು.

ಅಂತೆಯೇ ಈಗ ನಾವು ಸಿಂಡಿಕೇಟ್ ಬ್ಯಾಂಕ್ ಎಂದು ಕರೆಯುವಂತಿಲ್ಲ, ಕೆನರಾ ಎಂಬ ಹೆಮ್ಮೆಯ ಹೆಸರನ್ನು ನಮ್ಮ ರಾಜ್ಯದ ಬಿಜೆಪಿ ಸಂಸದರು ಬಿಟ್ಟುಕೊಟ್ಟರು. ಬೇರೆ ರಾಜ್ಯದ ಪ್ರಭಾವಿಗಳು ಛೀ.. ತೂ.. ಎಂದು ಹೇಳಿ ನಮ್ಮ ನಾಡಿನ ಅಸ್ಮಿತೆಯ ಹೆಸರನ್ನು ಕೀಳಾಗಿ ಕಂಡು ಬದಲಾವಣೆ ಮಾಡಿದರು. ಅವರ ಭಾಗದ ಹೆಸರನ್ನು ಬ್ಯಾಂಕ್ಗೆ ಇಟ್ಟುಕೊಂಡರು. ನಮ್ಮ ನಾಡಿನ ಬಿಜೆಪಿ ರಾಜಕಾರಣಿಗಳಿಗೆ ಇದು ಇನ್ನೂ ಅರ್ಥವಾಗಲಿಲ್ಲ ಎಂದು ಸುರೇಶ್ ಆಕ್ಷೇಪಿಸಿದರು.

# ನಂದಿನಿ ನಮ್ಮವಳು, ನಮ್ಮ ಹಾಲು ನಮ್ಮ ಬದುಕು ಅಮುಲ್ ಗೆ ಡಿಕೆ ಶಿವಕುಮಾರ್ ವಿರೋಧ



ಹಾಸನ: ಕನ್ನಡಿಗರ ಅಸ್ಮಿತೆಯಾದ ನಂದಿನಿ ಹಾಲು ಮತ್ತು ನಂದಿನಿ ಹಾಲಿನ ಉತ್ಪನ್ನಗಳನ್ನು ಬದಿಗೆ ತಳ್ಳಿ ಗುಜರಾತ್ ಮೂಲದ ಅಮುಲ್ ಹಾಲು ಕರ್ನಾಟಕದಲ್ಲಿ ಪಾರುಪತ್ಯ ಸ್ಥಾಪಿಸಲು ನೋಡುತ್ತಿದೆ. ಇದಕ್ಕೆ ಬಿಜೆಪಿ ಸರ್ಕಾರ ಸಹಕಾರ ನೀಡುತ್ತಿದೆ ಎಂದು ಪ್ರತಿಪಕ್ಷಗಳಾದ ಕಾಂಗ್ರೆಸ್, ಜೆಡಿಎಸ್ ನಾಯಕರು ಹಾಗೂ ಜನಸಾಮಾನ್ಯರ ಒಂದು ವರ್ಗ ಭಾರೀ ವಿರೋಧ ವ್ಯಕ್ತಪಡಿಸುತ್ತಿದೆ.

ನಂದಿನಿ ವರ್ಸಸ್ ಅಮುಲ್ ಕುರಿತಂತೆ ಸೋಷಿಯಲ್ ಮೀಡಿಯಾದಲ್ಲಿ ಭಾರೀ ಜಟಾಪಟಿ ನಡೆಯುತ್ತಿದೆ. ಈ ಬಗ್ಗೆ ಮುಖ್ಯಮಂತ್ರಿ ಸೇರಿದಂತೆ ಸರ್ಕಾರದ ಸಚಿವರುಗಳು ಸ್ಪಷ್ಟನೆ ನೀಡಿದರೂ ವಿರೋಧ ಪಕ್ಷದ ನಾಯಕರು ಕೇಳುವ ಸ್ಥಿತಿಯಲ್ಲಿಲ್ಲ.

ಹಾಸನದ ನಂದಿನಿ ಹಾಲು ಮತ್ತು ಉತ್ಪನ್ನಗಳ ಮಾರಾಟ ಕೇಂದ್ರವೊಂದಕ್ಕೆ ಭೇಟಿ ನೀಡಿದ ಕೆಪಿಸಿಸಿ ಅಧ್ಯಕ್ಷ ಡಿ ಕೆ ಶಿವಕುಮಾರ್ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಖರೀದಿಸಿ ಅಮುಲ್ ಗೆ ವಿರೋಧ ವ್ಯಕ್ತಪಡಿಸಿದರು.

# 1 ಕೋಟಿ 50 ಲಕ್ಷ ರೂ. ಮೌಲ್ಯದ ಗಾಂಜಾ ಜಪ್ತಿ ಮಾಡಿದ ಪೊಲೀಸರು



ಬೀದರ್: ತೆಲಂಗಾಣದಿಂದ ಮಹಾರಾಷ್ಟ್ರಕ್ಕೆ ಕಾನೂನು ಬಾಹಿರವಾಗಿ ಸಾಗಾಟ ಮಾಡುತ್ತಿದ್ದ 150 ಕೆಜಿ ಗಾಂಜಾ ಜಪ್ತಿ ಮಾಡಿ ಮೂವರು ಗಾಂಜಾಕೋರರನ್ನು ಬಂಧಿಸುವಲ್ಲಿ ಬೀದರ್ ಪೊಲೀಸರು ಯಶಸ್ವಿಯಾಗಿದ್ದಾರೆ.

ಬೀದರ್ ಜಿಲ್ಲೆಯ ಔರಾದ್ ತಾಲೂಕಿನ ಎಕಂಬಾ ಚೆಕ್ ಪೋಸ್ಟ್‌ನಲ್ಲಿ 1 ಕೋಟಿ 50 ಲಕ್ಷ ರೂ. ಬೆಲೆ ಬಾಳುವ 130 ಕೆಜಿ ಗಾಂಜಾ ಜಪ್ತಿ ಮಾಡಲಾಗಿದೆ. ಬೊಲೆರೋ (Bolero) ಕಾರಿನ ಸೀಕ್ರೆಟ್ ಲಾಕರ್ ಮೂಲಕ ಗಾಂಜಾ ಸಾಗಾಟ ಮಾಡುತ್ತಿದ್ದ ಬೀದರ್ ಮೂಲದ ಇಬ್ಬರು ಆರೋಪಿಗಳನ್ನು ಬಂಧಿಸಿದ್ದು, ಔರಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಅಷ್ಟೇ ಅಲ್ಲದೇ ತೆಲಂಗಾಣದಿಂದ ಬಸ್‌ನಲ್ಲಿ ಅಕ್ರಮ ಗಾಂಜಾ ಸಾಗಾಟ ಮಾಡುತ್ತಿದ್ದಾಗ ಬೀದರ್ ಜಿಲ್ಲೆಯ ಹುಮ್ನಾಬಾದ್ ಪಟ್ಟಣದಲ್ಲಿ ಪೊಲೀಸರು 20 ಕೆಜಿ ಗಾಂಜಾವನ್ನು ಜಪ್ತಿ ಮಾಡಿದ್ದಾರೆ. ತೆಲಂಗಾಣದಿಂದ ಬೀದರ್‌ಗೆ ಅಕ್ರಮವಾಗಿ ಗಾಂಜಾ ಸಾಗಾಟ ಮಾಡುತ್ತಿದ್ದ ಓರ್ವ ಆರೋಪಿಯನ್ನು ಬಂಧಿಸಿ ಹುಮ್ನಾಬಾದ್ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ. ಕಳೆದ ಮೂರು ದಿನಗಳಲ್ಲಿ ಒಟ್ಟು 2 ಕೋಟಿ 55 ಲಕ್ಷ ರೂ. ಮೌಲ್ಯದ ಗಾಂಜಾ ಜಪ್ತಿ ಮಾಡಿ ಬೀದರ್ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ ರಾಜ್ಯದ ಗಮನ ಸೆಳೆದಿದ್ದಾರೆ.

# ಕಡ್ಡಾಯವಾಗಿ ಮತದಾನ ಮಾಡಿ

ಬೈಲಹೊಂಗಲ: ಯಾವುದೇ ಆಸೆ ಆಮಿಷಕ್ಕೆ ಒಳಗಾಗದೇ ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡಬೇಕೆಂದು ತಾಪಂ.ಇಓ ಸುಭಾಸ ಸಂಪಗಾಂವಿ ಹೇಳಿದರು.

ಅವರು ತಾಲೂಕಿನ ನಾಗನೂರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ವೀಪ್ ಸಮಿತಿ ವತಿಯಿಂದ ಸಾರ್ವತ್ರಿಕ ಚುನಾವಣೆ 2023 ರ ಅಂಗವಾಗಿ ಉದ್ಯೋಗಖಾತ್ರಿ ಕೂಲಿಕಾರ–ರಿಗೆ ಸಾರ್ವಜನಿಕರಿಗೆ ಆರೋಗ್ಯ ಶಿಬಿರವನ್ನು ಆಯೋಜನೆ ಮಾಡುವ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪ್ರತಿಯೊಬ್ಬ ವ್ಯಕ್ತಿಗೆ ಆರೋಗ್ಯವು ಬಹಳ ಉಪಯುಕ್ತ ಹಾಗೂ ಆಧುನಿಕ ಆಹಾರದ ಮೊರೆಯಿಂದ ಹೊರಗುಳಿದು ಉತ್ತಮ ಆರೋಗ್ಯಕ್ಕಾಗಿ ಮತ್ತು ಉತ್ತಮ ಭವಿಷ್ಯಕ್ಕಾಗಿ ಆರೋಗ್ಯವು ಎಷ್ಟು ಮುಖ್ಯವೋ ಅಷ್ಟೇ ಮತದಾನವು ಮುಖ್ಯ ಮತ್ತು ಯಾವುದೇ ಇನ್ನಿತರ ಆಮಿಷಗಳಿಗೆ ಒಳಗಾಗದೆ ಕಡ್ಡಾಯವಾಗಿ ನಿಮ್ಮ ಅಮೂಲ್ಯವಾದ ಮತವನ್ನು ಚಾಲಿಸುವಂತೆ ಕರೆ ನೀಡಿದರು.

# ಕುಡಿಯುವ ನೀರಿನ ಘಟಕ ನಿರ್ವಹಣೆ ಪ್ರಾತ್ಯಕ್ಷಿಕೆ

ಬೆಳಗಾವಿ (ಚನ್ನಮ್ಮ ಕಿತ್ತೂರು): ಬೇಸಿಗೆಕಾಲದಲ್ಲಿ ಎದುರಾಗುವ ಸಂಭವನೀಯ ಶುದ್ಧ ಕುಡಿಯುವ ನೀರಿನ ಸಮಸ್ಯೆಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಹಾಗೂ ಸಮಸ್ಯೆ ತಲೆದೋರದಂತೆ ಮುನ್ನೆಚ್ಚರಿಕೆ ವಹಿಸುವುದಕ್ಕಾಗಿ ತಾಪಂ ವತಿಯಿಂದ ಶುದ್ಧ ಕುಡಿಯುವ ನೀರಿನ ನಿರ್ವಹಣೆ ಕುರಿತು ಗ್ರಾಪಂ ಅಭಿವೃದ್ಧಿ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಪ್ರಾತ್ಯಕ್ಷಿಕೆ ನೀಡಲಾಯಿತು.



ಕಿತ್ತೂರು ತಾಲೂಕಿನ ದೇಗಾಂವ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಸರಕೋಡ ಗ್ರಾಮದಲ್ಲಿ ಕುಡಿಯುವ ನೀರಿನ ಘಟಕ್ಕೆ ಸೋಮವಾರ ಭೇಟಿ ನೀಡಿದ ತಾಪಂ ಇಒ ಶ್ರೀ ಸುಭಾಷ ಸಂಪಗಾವಿ ಅವರು, ಪಿಲ್ಟರ್ ಸ್ವಚ್ಛತೆ ಕಾಪಾಡುವುದರ ಅಗತ್ಯತೆ ಹಾಗೂ ಅದರ ಮಹತ್ವವನ್ನು ತಿಳಿಸಿಕೊಟ್ಟರು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಪಿಡಿಓ ಗಳಿಗೆ ನೀರು ಫಿಲ್ಟರ್ ಮಷಿನ್ ನಿರ್ವಹಣೆ ಬಗ್ಗೆ ತರಬೇತಿ ನೀಡಲಾಯಿತು.

ತಹಸೀಲ್ದಾರ್ ರವೀಂದ್ರ ಹಾದಿಮನಿ, ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯ ಬೈಲಹೊಂಗಲ ಉಪವಿಭಾಗದ ಸಹಾಯಕ ಕಾರ್ಯಕಾರಿ ಅಭಿಯಂತರ ಎಸ್.ಕೆ. ಮುಕಸಜ್ಜಿ, ಕಿತ್ತೂರ ಹೆಸ್ಕಾಂ ನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಎಂ.ಕೆ.ಹಿರೇಮಠ, ಸಹಾಯಕ ನಿರ್ದೇಶಕರಾದ ಸುರೇಶ ನಾಗೋಜಿ, ಲಿಂಗರಾಜ ಹಲಕರ್ಣಿಮಠ ಇದ್ದರು.

# ನಾರಾ ಭರತ್ ರೆಡ್ಡಿ ಜಯಶೀಲರಾಗಲಿ ಶ್ರೀಶೈಲ ಪೀಠ ಜಗದ್ಗುರುಗಳ ಆಶೀರ್ವಾದ



ಬಳ್ಳಾರಿ: ಬಳ್ಳಾರಿ ನಗರ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾಗಿರುವ ನಾರಾ ಭರತ್ ರೆಡ್ಡಿ ಅವರು ಚುನಾವಣೆಯಲ್ಲಿ ಬಹುಮತ ಗಳಿಸುವ ಮೂಲಕ ಜಯಶೀಲರಾಗಲಿ ಎಂದು ಶ್ರೀಶೈಲ ಪೀಠದ ಜಗದ್ಗುರುಗಳು ನಾರಾ ಸೂರ್ಯನಾರಾಯಣ ರೆಡ್ಡಿ ಅವರಿಗೆ ಆಶೀರ್ವಾದ ಮಾಡಿದರು.

ಜಗದ್ಗುರುಗಳು ಸೋಮವಾರ ಬಳ್ಳಾರಿ ನಗರದ ವೀರಶೈವ ಲಿಂಗಾಯತ ಮುಖಂಡ ಮರಿಸ್ವಾಮಿಮಠ ಮಹಾಲಿಂಗಯ್ಯ (ತೆಂಗಿನಕಾಯಿ ರಾಜಣ್ಣ) ಅವರ ನಿವಾಸಕ್ಕೆ ಭೇಟಿ ನೀಡಿದ್ದರು. ಈ ವೇಳೆ ಕಾಂಗ್ರೆಸ್ ಮುಖಂಡ, ಮಾಜಿ ಶಾಸಕ ನಾರಾ ಸೂರ್ಯನಾರಾಯಣ ರೆಡ್ಡಿಯವರು ತಮ್ಮ ಬೆಂಬಲಿಗರೊಂದಿಗೆ ಜಗದ್ಗುರುಗಳನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

ಪ್ರಸಕ್ತ ವಿದ್ಯಮಾನಗಳ ಕುರಿತು ಸೂರ್ಯನಾರಾಯಣ ರೆಡ್ಡಿ ಅವ–ರಿಂದ ಪಡೆದ ಶ್ರೀಶೈಲ ಪೀಠದ ಜಗದ್ಗುರುಗಳು ನಾರಾ ಭರತ್ ರೆಡ್ಡಿ ಅವರು ಬಳ್ಳಾರಿ ನಗರ ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿರುವ ಬಗ್ಗೆ ಪ್ರಸ್ತಾಪಿಸಿದರು.

ಈ ಸಂದರ್ಭ ಜಗದ್ಗುರುಗಳು ಸೂರ್ಯನಾರಾಯಣ ರೆಡ್ಡಿ ಅವ–ರಿಗೆ ಆಶೀರ್ವದಿಸಿ, ನಾರಾ ಭರತ್ ರೆಡ್ಡಿ ಅವರು ಚುನಾವಣೆಯಲ್ಲಿ ಜಯಶೀಲರಾಗಲಿ ಎಂದು ಹಾರೈಸಿದರು.ಈ ವೇಳೆ ಅಖಿಲ ಭಾರತ ವೀರಶೈವ ಮಹಾಸಭಾದ ಬಳ್ಳಾರಿ ಜಿಲ್ಲಾಧ್ಯಕ್ಷ ಚಾನಾಳ್ ಶೇಖರ್, ಮ–ರಿಸ್ವಾಮಿಮಠ ಮಹಾಲಿಂಗಯ್ಯ (ರಾಜಣ್ಣ), ಅಭಿನಂದನ್ ಮತ್ತಿತರರು ಹಾಜರಿದ್ದರು.

ತದನಂತರ ಶ್ರೀಶೈಲ ಪೀಠದ ಜಗದ್ಗುರುಗಳು ಆಂಧ್ರಪ್ರದೇಶದ ವೀರಶೈವ ಲಿಂಗಾಯತ ಮಹಾಸಭಾದ ರಾಜ್ಯಾಧ್ಯಕ್ಷ ಶಿವಾನಂದ ಅವರ ನಿವಾಸಕ್ಕೆ ಭೇಟಿ ನೀಡಿದರು.

# ಬಳ್ಳಾರಿ ಎಪಿಎಂಸಿಯಲ್ಲಿ ಟೆಂಡರ್ ಆಗದ ಶೇಂಗ ರಾಶಿಗಳು,ರೊಚ್ಚಿಗೆದ್ದ ರೈತರಿಂದ ಆಕ್ರೋಶ ವ್ಯಕ್ತ: ರಸ್ತಾರೋಕೋ,ಟ್ರಾಫಿಕ್ ಜಾಮ್ ಜಾಮ್

ಬಳ್ಳಾರಿ: ಬಳ್ಳಾರಿ ನಗರದ ಎಪಿಎಂಸಿ ಮಾರುಕಟ್ಟೆಗೆ ಪ್ರತಿದಿನ ರೈತರು ಬೆಳೆದ ಧಾನ್ಯ ದವಸಗಳನ್ನು ತಂದು ಮಾರಿಕೊಂಡು ಹೋಗುವ ವಿಷಯ ಸಾಮಾನ್ಯವಾಗಿದೆ. ಆದ–'ರೇ ಸೋಮವಾರ ನಡೆದ ವಿಷಯಕ್ಕೆ ರೈತರು ಕಂಗಾಲಾಗಿದ್ದಾರೆ. ಬಳ್ಳಾರಿ ಮಾರುಕಟ್ಟೆಗೆ ಕರ್ನಾಟಕದ ರೈತರಲ್ಲದೇ ಆಂಧ್ರಪ್ರದೇಶದ ಅನಂತಪುರಂ ಮತ್ತು ಕರ್ನೂಲು ಜಿಲ್ಲೆಗಳಿಂದ ಇಲ್ಲಿಗೆ ಬಹಳಷ್ಟು ರೈತರು ಮಾಲು ತರುತ್ತಾರೆ. ಅದರಂತೆಯೇ ಸೋಮವಾರ ಶೇಂಗಾ ಮಾರುಕಟ್ಟೆ ಇರುವುದರಿಂದ ರೈತರು ಭಾನುವಾರವೇ ಹೆಚ್ಚಿನ ಸಂಖ್ಯೆಯಲ್ಲಿ ಶೇಂಗಾ ಮಾಲನ್ನು ತಂದಿದ್ದಾರೆ. ತಂದಿರುವ ಶೇಂಗಾ ರಾಶಿಗಳು ಮಾರುಕಟ್ಟೆಯಲ್ಲಿ ತುಂಬಿ ತುಳುಕುತಿ–ದ್ದಾವೆ. ಆದರೇ ಟೆಂಡರ್ ಮಾಡುವ ವ್ಯಾಪಾ–ರಿಗಳು ಇದೇ ಸರಿಯಾದ ಸಮಯವೆಂದು ಶೇಂಗ ಟೆಂಡರ್ ಮಾಡದೇ, ಶೇಂಗಾದಲ್ಲಿ ಕಲ್ಲುಗಳು ಹೆಚ್ಚಿಗೆ ಇದ್ದಾವೆ, ಕ್ವಿಂಟಾಲ್ ಶೇಂಗಾಗೆ 10–12 ಕೇಜಿ ಕಲ್ಲುಗಳು ಬರುತಿ–ದ್ದೂ, ನಾವು ಟೆಂಡರ್ ಹಾಕಿದರೇ ಕಲ್ಲುಗಳಿಗೆ ದುಡ್ಡು ಕೊಡಬೇಕಾಗುತ್ತದೆ ಎಂದು ನೆಪ ಒಡ್ಡಿ ಟೆಂಡರನ್ನು ಹಾಕಿಲ್ಲವೆಂದು ತಿಳಿದುಬಂದಿದೆ.



ಆದರೇ ರೈತರು ಹೇಳುತ್ತಿರುವುದು ನೋಡಿದರೇ ಟೆಂಡರ್ ಹಾಕುವವರು ಬೇಕಂತಲೇ 30 ಕೇಜಿ ಚೀಲಕ್ಕೆ 3–4 ಕೇಜಿ ಬಾಜು (ರಿವಾಜು) ತೆಗೆಯಲು ಸಂಚು ರೂಪಿಸಿದ್ದಾರೆ ಎಂದು ರೈತರು ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ. ಇದಕ್ಕೆ ರೈತ–ರಿಗೆ ದಲಾಲಿಗಳು ಸಂಪೂರ್ಣ ಬೆಂಬಲ ನೀಡಿ ಟೆಂಡರ್ ದಾರರ ಸಂಚನ್ನು ತಿರಸ್ಕರಿಸಿದ್ದಾರೆ.30 ಕೆಜಿಗೆ ಒಂದು ಕೇಜಿ ಬಾಜು ಮಾಮೂಲಿ ಇದೇ, ಅದೇ ಪ್ರಕಾರ ಟೆಂಡರ್ ನಡೆಸಬೇಕೆಂದು ರೈತರು ಮತ್ತು ದಲ್ಲಾಳರ ಒತ್ತಾಯವಾಗಿದೆ. ಈ ದಿನ ಟೆಂಡರ್ ಹಾಕದೇ ಟೆಂಡರ್‌ದಾರರು ತೆರಳಿದ್ದಾರೆ, ರೈತರು ಆಕ್ರೋಶವ್ಯಕ್ತ ಪಡಿಸಿ ಬೆಂಗಳೂರು ರಸ್ತೆಯ ವಾಹನಗಳ ಸಂಚಾರವನ್ನು ಬಂದ್ (ರಸ್ತಾರೂಕೋ) ನಡೆಸಿದರು. ವಿಷಯ ತಿಳಿದ ಪೋಲೀಸರು ಸ್ಥಳಕ್ಕೆ ಭೇಟಿ ನೀಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ಇದಾದ ಬಳಿಕ ಎಪಿಎಂಸಿಯ ಅಧ್ಯಕ್ಷರಾದ ಶ್ರೀಧರಗಡ್ಡೆ ಬಸವಲಿಂಗಪ್ಪ, ಕಾರ್ಯದರ್ಶಿ ನಂಜುಂಡೆಸ್ವಾಮಿ, ದಳಾಲರ ಸಂಘದ ಅಧ್ಯಕ್ಷ ಮಹಾರುದ್ರ ಗೌಡ, ಎಪಿಎಂಸಿ ಸದಸ್ಯ ಗೋವಿಂದು,ಎರ್ರಿಗೌಡ,ಶರಣಬಸವ ಮತ್ತು ಕಚೇರಿಯ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಈಗಾಗಲೇ ಸಮಯ ಸಂಜೆ 4.30 ಆಗಿರುವುದರಿಂದ ಸಮಯದ ಅಭಾವವಿದೆ. ನಾವು ನಿಮಗೆ ಇವತ್ತಿನ ಊಟ ಮತ್ತು ಮಲಗುವ ವ್ಯವಸ್ಥೆಯನ್ನು ಮಾಡಿಕೊಟ್ಟು ಬೆಳಿಗ್ಗೆ 7 ಗಂಟೆಗೆಲ್ಲಾ ಟೆಂಡರ್ ಮಾಡಿಸಿ ನಿಮಗೆ ಅನುಕೂಲ ಮಾಡಿಕೊಡುತ್ತೇವೆ ಎಂದು, ಈ ದಿನದ ಅಂತರಾಯಕ್ಕೆ ಕ್ಷಮೆ ಇರಲಿ ಎಂದು, ಮುಂದಿನ ದಿನಗಳಲ್ಲಿ ರೈತರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುತ್ತೇವೆ ಎಂದು ರೈತರನ್ನು ಮನವೊಲಿಸಿದರು. ದಳಾಲರು ಮತ್ತು ಟೆಂಡರ್‌ದಾರರನ್ನು ಕರೆಸಿ ಮೀಟಿಂಗನ್ನು ಹಮ್ಮಿಕೊಳ್ಳುತ್ತೇವೆ, ನಿಮಗೆ ನಷ್ಟವಾಗದಂತೆ ನೊಡಿಕೊಳ್ಳುವ ಜವಾಬ್ದಾರಿ ನಮ್ಮದು ಎಂದು ಅಧಿಕಾರಿಗಳು ಭರವಸೆಯನ್ನು ನೀಡಿದರು. ಆ ಬಳಿಕ ರೈತರು ಪ್ರತಿಭಟನೆಯನ್ನು ಪೂರ್ಣಗೊಳಿಸಿದರು.

# ಸಮುದಾಯ ದತ್ತ ಕಾರ್ಯಕ್ರಮ



ಬಳ್ಳಾರಿ: ಮಕ್ಕಳು ವರ್ಷಪೂರ್ತಿ ಓದಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ಉತ್ತೀರ್ಣಗೊಂಡಿರುತ್ತೀರಿ. ಕಲಿತದನ್ನು ಮರೆಯದಂತೆ ರಜೆಯಲ್ಲಿ ಗ್ರಂಥಾಲಯ ಪುಸ್ತಕಗಳನ್ನು ಓದುತ್ತಾ ಇರಬೇಕು ಎಂದು ಶಾಲೆಯ ಮುಖ್ಯ ಗುರುಗಳಾದ ರವಿಚೇಳ್ಳಗುರ್ಕಿ ಹೇಳಿದರು.

ತಾಲ್ಲೂಕಿನ ಸಂಜೀವರಾಯನಕೋಟೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಮುದಾಯ ದತ್ತ ಕಾರ್ಯಕ್ರಮ ಪ್ರಯುಕ್ತ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಮಕ್ಕಳು ತಮ್ಮ ಪ್ರತಿಭೆಯನ್ನು ಹೊರಹಾಕಲು ಉತ್ತಮ ವೇದಿಕೆ ಎಂದು ಹೇಳಿದರು.ಪ್ರತಿಭಾವಂತ ವಿದ್ಯಾರ್ಥಿಗಳಾದ ಹರ್ಷವರ್ಧನ್, ಭಾವನ,ಸುಷ್ಮಿತ ಹಾಗೂ ದೀಕ್ಷ ಅವರಿಗೆ ಬಹುಮಾನ ವಿತರಿಸಲಾಯಿತು.ಶಿಕ್ಷಕರಾದ ಮುನಾವರ ಸುಲ್ತಾನ,ಬಸವರಾಜ,ದಿಲ್ಷಾದ್ ಬೇಗಂ,ಸುಮತಿ, ಸುಧಾ,ವೈಶಾಲಿ, ಶ್ವೇತಾ, ಶಶಮ್ಮ,ರಾಮಾಂಜಿನೇಯ ಮುಂತಾದವರು ಉಪಸ್ಥಿತರಿದ್ದರು.

# ಕಂಪ್ಲಿ ಹಾಲಿ ಮತ್ತು ಮಾಜಿ ಶಾಸಕರ,ದಂಪತಿಗಳ ಬಿರುಸಿನ ಪ್ರಚಾರ: ಎರಡು ಪಕ್ಷಗಳಲ್ಲಿ ಜೋರಾದ ಪಕ್ಷಾಂತರ ಪರ್ವ

ಬಳ್ಳಾರಿ: ಸಾರ್ವತ್ರಿಕ ಚುನಾವಣೆಗೆ ಇನ್ನು ನಾಮಪತ್ರಗಳ ಸಲ್ಲಿಕೆ ಆರಂಭವಾಗಿಲ್ಲ, ಆದರೆ ಕಂಪ್ಲಿ ತಾಲ್ಲೂಕಿನಲ್ಲಿ ಹಾಲಿ ಮತ್ತು ಮಾಜಿ ಶಾಸಕರ ಮತಯಾಚನೆ ಬಿರುಸಿನಿಂದ ಸಾಗಿರುವುದು ಒಂದೆಡೆಯಾದರೆ, ತಾಲ್ಲೂಕಿನಲ್ಲಿ ಪಕ್ಷಾಂತ ಪರ್ವ ಜೋರಾಗಿದ್ದು,ಆ ಪಕ್ಷದಿಂದ ಈ ಪಕ್ಷಕ್ಕೆ, ಈ ಪಕ್ಷದಿಂದ ಆ ಪಕ್ಷಕ್ಕೆ ಸೇರ್ಪಡೆ ಜೋರಾಗಿ ನಡೆದಿದೆ.

ಹಾಲಿ ಶಾಸಕ ಜೆ.ಎನ್.ಗಣೇಶ ಅವರು ಕಾಂಗ್ರೆಸ್ ಪಕ್ಷದಿಂದ ತಮಗೆ ಮೊದಲ ಪಟ್ಟಿಯಲ್ಲಿಯೇ ಟಿಕೇಟ್ ಘೋಷಣೆಯಾಗುತ್ತಿದ್ದಂತೆಯೇ ಕಂಪ್ಲಿ ತಾಲ್ಲೂಕಿನ ವಿವಿಧ ಗ್ರಾಮಗಳು ಸೇರಿದಂತೆ ಕ್ಷೇತ್ರದಲ್ಲಿ ಕಾಲಿಗೆ ಚಕ್ರಕಟ್ಟಿಕೊಂಡವರಂತೆ ಪಕ್ಷದ ಮುಖಂಡರು, ಕಾರ್ಯಕರ್ತರೊಂದಿಗೆ ಬಿರುಸಿನ ಪ್ರಚಾರ ಕೈಗೊಂಡಿದ್ದಾರೆ. ಕಳೆದ 5 ವರ್ಷಗಳ ಅವಧಿಯಲ್ಲಿ ತಾವು ವಿರೋಧ ಪಕ್ಷದಲ್ಲಿದ್ದರೂ ಸಹಿತ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳನ್ನು ಸಾರ್ವಜನಿಕರಿಗೆ ತಿಳಿಸುವ ಮೂಲಕ ಮತಯಾಚನೆಯಲ್ಲಿ ತೊಡಗಿದ್ದಾರೆ. ಕಳೆದ 5 ವರ್ಷಗಳ ಅವಧಿಯಲ್ಲಿ ಎರಡು ವರ್ಷ ಮಹಾಮಾರಿ ಕೊರೊನಾ ಸೊಂಕಿನಿಂದಾಗಿ ಕ್ಷೇತ್ರದಲ್ಲಿ ಏನನ್ನೂ ಮಾಡದಿದ್ದರೂ ಸಹಿತ ಮೂರು ವರ್ಷಗಳಲ್ಲಿ ತೃಪ್ತಿಕರವಾದ ಕಾರ್ಯ ಮಾಡಿದ್ದೇನೆ. ರಾಜ್ಯದಲ್ಲಿ ಈಗಾಗಲೇ ಭಾಜಪ ಸರ್ಕಾರದಿಂದ ಜನತೆ ಬೇಸತ್ತಿದ್ದು, 2023ರಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಶತಸಿದ್ಧವಾಗಿದ್ದು, ಕ್ಷೇತ್ರದ ಸಮಗ್ರವಾದ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವಂತೆ ಹಾಗೂ ತಮ್ಮನ್ನು ಎರಡನೇ ಬಾರಿಗೆ ಗೆಲ್ಲಿಸುವಂತೆ ಮನವಿ ಮಾಡುವ ಮೂಲಕ ಮತಯಾಚನೆ ಮಾಡುತ್ತಿದ್ದಾರೆ.

ಇದರ ಜೊತೆಗೆ ಇವರ ಪತ್ನಿಯೂ ಸಹಿತ ಮಹಿಳಾ ಕಾರ್ಯಕರ್ತರೊಂದಿಗೆ



ಕ್ಷೇತ್ರದಲ್ಲಿ ಮತಯಾಚನೆಗೆ ಹಗಲಿರುಳು ಶ್ರಮಿಸುತ್ತಿದ್ದಾರೆ.

ಇನ್ನು ಕಂಪ್ಲಿ ವಿಧಾನಸಭಾ ಕ್ಷೇತ್ರವಾಗಿ ರಚನೆಯಾದ ಮೇಲೆ ಮೊದಲ ಎರಡು ಅವಧಿಗೆ ಶಾಸಕರಾಗಿದ್ದ ಮಾಜಿ ಶಾಸಕ ಟಿ.ಎಚ್.ಸುರೇಶಬಾಬು ಅವರು ಬಿಜೆಪಿಯಿಂದ ಇನ್ನು ಟಿಕೇಟ್ ಘೋಷಣೆಯಾಗದಿದ್ದರೂ, ಕ್ಷೇತ್ರದಿಂದ ಕೇವಲ ಒಬ್ಬರೇ ಆಕಾಂಕ್ಷಿಗಳಿರುವುದ–ರಿಂದ ಹಾಗೂ ಸಚಿವ ಶ್ರೀರಾಮುಲು ಅವರ ಬೆಂಬಲ ಇರುವ ಹಿನ್ನೆಲೆಯಲ್ಲಿ ತಾಲ್ಲೂಕು ಮತ್ತು ಕ್ಷೇತ್ರದಲ್ಲಿ ಹಗಲಿರುಳು ಮತಯಾಚನೆಯಲ್ಲಿ ತೊಡಗಿದ್ದು, ಕಳೆದ ಎರಡು ಅವಧಿಯಲ್ಲಿ ತಾವು ಮಾಡಿದ ಅಭಿವೃದ್ಧಿ ಕೆಲಸಗಳನ್ನು ವಿವರಿಸುವ ಮೂಲಕ ಮತದಾರರನ್ನು ಸೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ. ಕ್ಷೇತ್ರದಲ್ಲಿ ತಮ್ಮ ಅವಧಿಯಲ್ಲಿಯೇ ಕಂಪ್ಲಿ ಮತ್ತು ಕುರುಗೋಡುಗಳನ್ನು ಘೋಷಣೆ ಮಾಡಿದ್ದು, ಎರಡು ತಾಲ್ಲೂಕುಗಳಲ್ಲಿ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಿರುವುದನ್ನು ನೆನಪಿಸುವ ಮೂಲಕ ರೈತರಿಗೆ ಎರಡನೇ ಬೆಳೆಗೆ ನೀರೊದಗಿಸುವ ಮೂಲಕ ರೈತರ ಸಂಕಷ್ಟಗಳನ್ನು ಪರಿಹಾರ ಮಾಡಲು ಶ್ರಮಿಸಿದ್ದೇನೆ ಎಂದು ಮತದಾರರ ಮನವೊಲಿಸುವ ಮೂಲಕ ಮತಯಾಚನೆಯಲ್ಲಿ ತೊಡಗಿದ್ದಾರೆ. ಇವರ ಪತ್ನಿಯೂ ಸಹಿತ ಪಕ್ಷದ ಮಹಿಳಾ ಮುಖಂಡರೊಂದಿಗೆ ಕ್ಷೇತ್ರದಲ್ಲಿ ಹಗಲಿರುಳೆನ್ನದೆ ಬಿರು ಬಿಸಲನ್ನು ಲೆಕ್ಕಿಸದೇ ಮನೆ ಮನೆಗೆ ತೆರಳುವ ಜೊತೆಗೆ ಮಹಿಳೆಯರು ಇರುವ ಜಮೀನುಗಳಿಗೆ ತೆರಳಿ ತಮ್ಮ ಪತಿಯ ಪರವಾಗಿ ಮತಯಾಚನೆ ಮಾಡುತ್ತಿದ್ದಾರೆ.

ಕ್ಷೇತ್ರದಲ್ಲಿ ಹಾಲಿ ಮತ್ತು ಮಾಜಿ ಶಾಸಕರಿಗೆ ಮತದಾರರಿಂದ ಹಾಗೂ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆಗಳು ದೊರಕುತ್ತಿದ್ದು, ಯಾರು ಯಾರಿಗೆ ಮತಚಲಾಯಿಸುತ್ತಾರೆನ್ನುವುದನ್ನು ಮೆ.13ರ ಮತೆಣಿಕೆಯವರೆಗೂ ಕಾದು ನೋಡಬೇಕಿದೆ.

ಇನ್ನು ತಾಲ್ಲೂಕು ಸೇರಿದಂತೆ ಕ್ಷೇತ್ರದಲ್ಲಿ ಪಕ್ಷಾಂತರ ಪರ್ವ ಜೋರಾಗಿಯೇ ನಡೆದಿದ್ದು, ಕಾಂಗ್ರೆಸ್‌ನವರು ಬಿಜೆಪಿ, ಬಿಜೇಪಿಯವರು ಕಾಂಗ್ರೆಸ್‌ಗೆ ಸೇರ್ಪಡೆಯಾಗುತ್ತಿದ್ದಾರೆ ಇದರ ಜೊತೆಗೆ ಜೆಡಿಎಸ್ ಪಕ್ಷಕ್ಕೂ ಸಹಿತ ಸೇರ್ಪಡೆಯಾಗುತ್ತಿರುವುದು ಕ್ಷೇತ್ರದಲ್ಲಿ ಕಂಡು ಬರುತ್ತಿದ್ದು, ಕಾಂಗ್ರೆಸ್ ಪಕ್ಷದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಸೇರುತ್ತಿರುವುದು ಕಂಡು ಬರುತ್ತಿದೆ.ಕಾಂಗ್ರೆಸ್ ಪಕ್ಷದಲ್ಲಿನ ಹಳೇ ಮುಖಗಳು ಹಾಲಿ ಶಾಸಕರೊಂದಿಗೆ ಮುನಿಸಿಕೊಂಡಿರುವುದು ಆ ಪಕ್ಷಕ್ಕೆ ಮುಳುವಾಗುವುದೇನೋ ಎನ್ನುವ ಪರಿಸ್ಥಿತಿಯೂ ಇದೆ. ಜೊತೆಗೆ ಕಾಂಗ್ರೆಸ್ ಟಿಕೇಟ್ ಆಕಾಂಕ್ಷಿಯಾಗಿದ್ದ ಗಂಗಾವತಿ ಮೂಲಕ ರಾಜು ನಾಯಕ್ ಜೆಡಿಎಸ್ ಸೇರಿರುವುದು ಕಾಂಗ್ರೆಸ್ ಪಕ್ಷಕ್ಕೆ ತೊಡಕಾದರೆ, ಮತ್ತೋರ್ವ ಟಿಕೇಟ್ ಆಕಾಂಕ್ಷಿ ರಾಮಸಾಗರದ ಬಿ.ನಾರಾಯಣಪ್ಪನವರ ನಡೆ ಇನ್ನು ಸ್ಪಷ್ಟವಾಗಿಲ್ಲ, ಜೊತೆಗೆ ಇವರ ಜೊತೆಗೆ ಗುರುತಿಸಿಕೊಂಡಿದ್ದ ಕಂಪ್ಲಿ ಭಾಗದ ಕಾಂಗ್ರೆಸ್ ನಾಯಕ ನಡೆ ಎತ್ತಕಡೆ ಎನ್ನುವುದು ಇನ್ನು ತಿಳಿದಿಲ್ಲ.

ಒಟ್ಟಾರೆ ಕಂಪ್ಲಿ ತಾಲ್ಲೂಕಿನಲ್ಲಿ ಹಾಲಿ,ಮಾಜಿ ಶಾಸಕರು ಹಾಗೂ ಅವರ ಪತ್ನಿಯರ ಮತಭೇಟೆ ಮಾತ್ರ ಭರ್ಜರಿಯಾಗಿ ನಡೆದಿದೆ ಎಂದು ಹೇಳಬಹುದಾಗಿದೆ.

## ಏ.12 ರಂದು ಸಾರ್ವಜನಿಕ ದೂರು, ಅಹವಾಲು ಸ್ವೀಕಾರ

**ಧಾರವಾಡ:** ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ನಿರ್ದೇಶನದಂತೆ, ಕರ್ನಾಟಕ ಲೋಕಾಯುಕ್ತ, ಧಾರವಾಡ ಕಚೇರಿಯ ಪೊಲೀಸ್ ಅಧಿಕಾರಿಗಳು ಸಾರ್ವಜನಿಕ ದೂರು, ಅಹವಾಲುಗಳನ್ನು ಸ್ವೀಕರಿಸವರು.

ಏಪ್ರಿಲ್ 12 ರಂದು ಬೆಳಿಗ್ಗೆ 11 ಗಂಟೆಯಿಂದ ಮದ್ಯಾಹ್ನ 2 ಗಂಟೆಯ ವರೆಗೆ ಹೆಚ್ಡಿಎಮ್ಸಿ ಆಯುಕ್ತರ ಕಚೇರಿ ಮುಖ್ಯ ಕಟ್ಟಡದ ಅಮೃತ ಮಹೋತ್ಸವ ಸಭಾ ಭವನದಲ್ಲಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು, ಪೊಲೀಸ್ ಉಪಾಧೀಕ್ಷಕರು ಹಾಗೂ ಪೊಲೀಸ್ ನಿರೀಕ್ಷಕರವರು ಜಿಲ್ಲೆಯ ಸಾರ್ವಜನಿಕರಿಂದ ದೂರು ಸ್ವೀಕಾರ ಮಾಡುವರು.

ಯಾವುದೇ ಸರ್ಕಾರಿ ಅಧಿಕಾರಿ, ನೌಕರರು ಸರ್ಕಾರಿ ಸೇವೆ ಒದಗಿಸುವಲ್ಲಿ ಲಂಚಕ್ಕೆ ಬೇಡಿಕೆ ಇಟ್ಟಲ್ಲಿ ಅನಾವಶ್ಯಕ ವಿಳಂಬ ಮಾಡುತ್ತಿದ್ದಲ್ಲಿ, ಆ ಬಗ್ಗೆ ದೂರು ನೀಡಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರಿ–ಮೇಕೆ ಸಾಕಾಣಿಕೆ ತರಬೇತಿ

**ಧಾರವಾಡ:** ಧಾರವಾಡ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಧಾರವಾಡ, ಗದಗ, ಹಾವೇರಿ, ಕಾರವಾರ ಜಿಲ್ಲೆಗಳ ರೈತ, ರೈತ ಮಹಿಳೆಯರಿಗೆ ಎರಡು ದಿನಗಳ ಅವಧಿಯ ತಂಡವಾರು ಉಚಿತವಾಗಿ ವೈಜ್ಞಾನಿಕ ಹೈನುಗಾರಿಕೆ ಮತ್ತು ಕುರಿ, ಮೇಕೆ ಸಾಕಾಣಿಕೆಯ ತರಬೇತಿಯನ್ನು ನೀಡಲಾಗುತ್ತದೆ.

ಆಸಕ್ತಿಯುಳ್ಳ ರೈತರು ತಮ್ಮ ಹೆಸರನ್ನು ಎಸ್‌ಎಂ–ಎಸ್ ಸಂದೇಶದ ಮೂಲಕ ಕಚೇರಿಯ ದೂರವಾಣಿ ಕರೆ ಮುಖಾಂತರ ಅಥವಾ ಮುದ್ದಾಂ ಭೇಟಿ ನೀಡಿ, ತಮ್ಮ ಹೆಸರನ್ನು ಬೆಳಿಗ್ಗೆ 10–15 ರಿಂದ ಸಂಜೆ 5–15 ರವ ರೆಗೆ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ:0836–2443743, ಮೊ.ಸಂ:9591024499, 8618022108 ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯ ಪಶು ವೈದ್ಯಾಧಿಕಾರಿಗಳು ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ಜೈನ ಸಮಾಜದ ಪದವಿಧರರಿಗೆ ಯುಪಿಎಸ್‌ಸಿ ಪರೀಕ್ಷೆ ತರಬೇತಿ

**ಬೆಳಗಾವಿ:** ಜೈನ ಇಂಡರ್‌ನ್ಯಾಷನಲ್ ಟ್ರೆಡ್ ಆರ್ಗನೈಝೇಶನ್ ಜಿತೋ ಸಂಸ್ಥೆಯ ಅಂಗ ಸಂಸ್ಥೆಯಾದ ಜಿತೋ ಆಡಳಿತ ತರಬೇತಿ ಫೌಂಡೇಶನ ವತಿಯಿಂದ ಜೈನ ಸಮಾಜದಲ್ಲಿನ ಪದವಿಧರರಿಗೆ ಯುಪಿಎಸ್‌ಸಿ ಪರೀಕ್ಷೆಯ ಸಿದ್ದತೆಗಳ ಕುರಿತು ತರಬೇತಿ ನೀಡಲಾಗುತ್ತಿದೆ.

ಕಳೆದ 10 ವರ್ಷಗಳಿಂದ ಜೈನ ಸಮಾಜದಲ್ಲಿನ ಪದವಿಧರರಿಗೆ ಈ ತರಬೇತಿ ನೀಡುತ್ತ ಬಂದಿದ್ದು, ಈ ಬಾರಿಯೂ ಸಹ ನುರಿತ ತಜ್ಞರಿಂದ ತರಬೇತಿ ನೀಡಲಾಗುವುದು. ಐಎಎಸ್, ಐಪಿಎಸ್, ಐಆರ್–ಎಸ್. ಸೇರಿದಂತೆ ಇನ್ನುಳಿದ ಕೇಂದ್ರ ಸರಕಾರದ ಅಧಿನದಲ್ಲಿ ಬರುವ ಹುದ್ದೆಗಳ ಪರೀಕ್ಷೆಗಳಿಗಾಗಿ ತರಬೇತಿ ನೀಡಲಾಗುವುದು. ಇದರ ಜೊತೆಗೆ ಬ್ಯಾಂಕಿಂ–ಗ್ ಕ್ಷೇತ್ರಕ್ಕೆ ಸಂಬಂಧಿಸಿದ ಹುದ್ದಗಳಿಗಾಗಿ ನಡೆಯುವ ಪರೀಕ್ಷೆಗಳಿಗೂ ತರಬೇತಿ ನೀಡಲಾಗುವುದು .

ಈ ತರಬೇತಿಗಾಗಿ ಹೆಸರು ನೊಂದಾಯಿಸುವ ಅಭ್ಯರ್ಥಿಗಳು ಪ್ರವೇಶ ಪರೀಕ್ಷೆ ಬರೆಯವುದು ಕಡ್ಡಾಯವಾಗಿದೆ. ಸದರಿ ಪ್ರವೇಶ ಪರೀಕ್ಷೆ ಬೆಳಗಾವಿಯ ಭರತೇಶ ಶಿಕ್ಷಣ ಸಂಸ್ಥೆಯಲ್ಲಿ ನಡೆಯಲಿದೆ. ಹೆಸರು ನೊಂದಾಯಿಸಲು ಏಪ್ರಿಲ 15 ಕೊನೆಯ ದಿನಾಂಕವಾಗಿದ್ದು, ಪ್ರವೇಶ ಪರೀಕ್ಷೆ ಮೇ 7 ರಂದು ನಡೆಯಲಿದೆ. ಹೆಚ್ಚಿನ ವಿವರಗಳಿಗಾಗಿ ವಿಜಯ ಪಾಟೀಲ – 9632245884 ಮತ್ತು ಕುಂತಿನಾಥ ಕಲಮನಿ 9480448108 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಚುನಾವಣೆ ಕಾರ್ಯಗಳಿಗೆ ಮಕ್ಕಳ ಬಳಕೆ ನಿಷೆಧ

**ಬೆಳಗಾವಿ:** 2023–24 ನೇ ಸಾಲೀನ ವಿಧಾನಸಭೆ ಸಾರ್ವತ್ರಿಕ ಚುನಾವಣೆಯಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇಧಿಸಲಾಗಿದೆ.

ಬಾಲಕಾರ್ಮಿಕ ಕಾಯ್ದೆ 1986 ಮತ್ತು ತಿದ್ದುಪಡಿ ಕಾಯ್ದೆ 2016 ರ ಅನ್ವಯ ಚುನಾವಣಾ ಕಾರ್ಯಗಳಲ್ಲಿ ಯಾವುದೇ ಪಕ್ಷದವರು 18 ವರ್ಷದೊಳಗಿನ ಮಕ್ಕಳನ್ನು ಚುನಾವಣೆ ಕಾರ್ಯಕ್ಕೆ ಬಳಸಿಕೊಂಡಿದ್ದಲ್ಲಿ ಕಾಯ್ದೆಯ ಪ್ರಾವಧಾನಗಳಂತೆ ಸಕ್ಷಮ ಪ್ರಾಧಿಕಾರದಲ್ಲಿ ಮೊಕದ್ದಮೆಯನ್ನು ಹೂಡಿ ಶಿಕ್ಷೆಗೆ ಒಳಪಡಿಸಲಾಗುವುದು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆ ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರರ 132 ನೇ ಜನ್ಮ ದಿನಾಚರಣೆ

**ಬೆಳಗಾವಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಏಪ್ರಿಲ್ 14.2023 ರಂದು ಭಾರತ ರತ್ನ ಸಂವಿಧಾನಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರ ರವರ 132 ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.

ಬೆಳಗ್ಗೆ 10 ಗಂಟೆಗೆ ಬೆಳಗಾವಿಯ ಅಂಬೇಡ್ಕರ ಉದ್ಯಾನವನದಲ್ಲಿ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ ಅಂಬೇಡ್ಕರ ರವರ ಭಾವಚಿತ್ರ ಪೂಜೆ ಹಾಗೂ ಮಧ್ಯಾಹ್ನ 12 ಗಂಟೆಗೆ ಧರ್ಮವೀರ ಸಂಭಾಜಿ ವೃತ್ತದಿಂದ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದೆ ಹಾಗೂ ಸಂಜೆ 4 ಗಂಟೆಗೆ ಅಂಬೇಡ್ಕರ ಉದ್ಯಾನವನದಲ್ಲಿ ಮುಖ್ಯ ಸಮಾರಂಭ ಜರುಗಲಿದೆ. ಬೆಳಗಾವಿಯ ಪ್ರಾದೇಶಿಕ ಆಯುಕ್ತರಾದ ಡಾ. ಬಗಾದಿ ಗೌತಮ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಬೆಳಗಾವಿ ಉತ್ತರ ವಲಯದ ಆರಕ್ಷಕ ಮಹಾನಿರಿಕ್ಷಕರಾದ ಎನ್. ಸತೀಶಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಜಿಲ್ಲಾಧಿಕಾರಿಗಳಾದ ನಿತೇಶ್ ಕೆ. ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ ಹಾಗೂ ಮುಂಬೈ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಕೆ. ಡಿ. ಮಂತ್ರೇಶಿ ಅವರು ಡಾ. ಬಾಬಾಸಾಹೇಬ ಅಂಬೇಡ್ಕರ ರವರ ಜೀವನ ಹಾಗೂ ಸಾಧನೆಗಳ ಬಗ್ಗೆ ಉಪನ್ಯಾಸ ನೀಡಲಿದ್ದಾರೆ.

ಬೆಳಗಾವಿ ನಗರದ ಪೊಲೀಸ್ ಆಯುಕ್ತರಾದ ಡಾ. ಎಂ ಬಿ ಬೋರಲಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಸಂಜೀವ ಎಂ. ಪಾಟೀಲ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್, ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರಾದ ಬಿ ಕಲ್ಲೇಶ್, ಮಹಾನಗರ ಪಾಲಿಕೆ ಆಯುಕ್ತರಾದ ರುದ್ರೇಶ್ ಘಾಳಿ ಹಾಗೂ ಮತ್ತಿತರ ಗಣ್ಯರು ಮತ್ತು ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

# ಸಿಐಟಿಬಿ ಅಧ್ಯಕ್ಷ ದಿವಂಗತ 'ಪದ್ಮನಾಭ' ಕುಟುಂಬಸ್ಥರಿಗೆ ಕಾರು ಚಾಲಕನಿಂದ 20 ಕೋಟಿ ರೂ ಆಸ್ತಿ ವಂಚನೆ

ಬೆಂಗಳೂರು: ಸಿಟಿ ಇಂಪ್ರೂವ್‌ಮೆಂಟ್ ಟ್ರಸ್ಟ್ ಬೋರ್ಡ್ (ಸಿಐಟಿಬಿ) ಅಧ್ಯಕ್ಷ ಸಿಜೆ ಪದ್ಮನಾಭ ಅವರ ವಂಶಸ್ಥರಿಗೆ ಇಬ್ಬರು ವ್ಯಕ್ತಿಗಳು ವಂಚನೆ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ.

ಪದ್ಮನಾಭ ಅವರ ಕುಟುಂಬಸ್ಥ–ರಿಗೆ ಸೇರಿದೆ ಆಸ್ತಿಯ ಖಾತೆಯನ್ನು ಇಬ್ಬರು ವಂಚಕರು ತಮ್ಮ ಹೆಸ–ರಿಗೆ ವರ್ಗಾವಣೆ ಮಾಡಿಕೊಂಡಿದ್ದಾರೆ. ಕೋಟ್ಯಂತರ ರೂಪಾಯಿ ಮೌಲ್ಯದ ಆಸ್ತಿ ವಂಚನೆಯಾಗಿದ್ದು ಪದ್ಮನಾಭ ಅವರ ಕುಟುಂಬಸ್ಥರು ಕಂಗಲಾಗಿದ್ದಾರೆ.

ಲಾಲ್‌ಬಾಗ್‌ನ ಮೊದಲ ಭಾರತೀಯ ಸೂಪರಿಂಟೆಂಡೆಂಟ್ ಮತ್ತು ಲಂಡನ್‌ನ ಕ್ಯೂ ಗಾರ್ಡನ್ಸ್‌ನಲ್ಲಿ ತರಬೇತಿ ಪಡೆದ ಕರ್ನಾಟಕ ತೋಟಗಾರಿಕೆಯ ಮೊದಲ ಭಾರತೀಯ ನಿರ್ದೇಶಕರಾಗಿದ್ದ ರಾವ್ ಬಹದ್ದೂರ್ ಎಚ್‌ಸಿ ಜವರಯ್ಯ ಅವರ ಮಗ ಪದ್ಮನಾಭ. ಜವರಯ್ಯ ವೃತ್ತಕ್ಕೆ ಅವರ ಹೆಸರು ಇಡಲಾಗಿದೆ. ಪದ್ಮನಾಭ ಅವರ ಮರಣದ ಎರಡು ದಶಕಗಳ ನಂತರ, ಅವರ ಚಾಲಕನಾಗಿದ್ದ ಫ್ರಾನ್ಸಿಸ್ ಪೌನ್ನಿ ಕನಕ ಪದ್ಮನಾಭ (84) ಅವರ ಸಹಾಯವನ್ನು ಕೋರಿದ್ದ. ಜೊತೆಗೆ ಅವರ ಸಹಿಯನ್ನು ದೃಹಾಕಿಸಿಕೊಂಡಿದ್ದ. ಆ ಸಹಿಗಳು ಸೇಲ್ ಡೀಡ್‌ಗಳು ಮತ್ತು ವಿಲ್‌ನಲ್ಲಿವೆ.

ಈಗಿನ ಮಾರುಕಟ್ಟೆ ದರದಲ್ಲಿ 20 ಕೋಟಿ ರೂ.ಗೂ ಹೆಚ್ಚು ಮೌಲ್ಯದ 8,100 ಚದರ ಅಡಿ ವಿಸ್ತೀರ್ಣ ಹೊಂದಿರುವ ಜಯನಗರ ಮೊದಲ ಬ್ಲಾಕ್‌ನಲ್ಲಿರುವ ತನ್ನ ಸಂಪೂರ್ಣ ಆಸ್ತಿಗೆ ಅರಿವಿಲ್ಲದೆ ಕನಕ ಪದ್ಮನಾಭ ಸಹಿ




ಹಾಕಿದ್ದಾರೆ ಎಂದು ಪೊಲೀಸ್ ದೂರಿನಲ್ಲಿ ತಿಳಿಸಲಾಗಿದೆ.

ಫ್ರಾನ್ಸಿಸ್ ಮತ್ತು ಆತನ ಸಹಚರ ಕೃಷ್ಣ ಮುರುಗನ್ ಈಗಾಗಲೇ ಶ್ರೀಮಂತ ಜಮೀನುದಾರರಾಗಿದ್ದ ಕನಕಾ ಅವ–ರಿಗೆ ಪುರಾತನ ವಜ್ರದ ನೆಕ್ಲೇಸ್, ಮಾಣಿಕ್ಯ ನೆಕ್ಲೆಸ್ ಮತ್ತು 33 ಆಯ್ದ ಪುರಾತನ ಚಿನ್ನ ಮತ್ತು ಬೆಳ್ಳಿಯ ಬೆಲೆಬಾಳುವ ವಸ್ತುಗಳು ಮತ್ತು 1 ಕೋಟಿ ರೂ.ಗೂ ಹೆಚ್ಚು ಮೌಲ್ಯದ ಆಭರಣಗಳನ್ನು ವಂಚಿಸಿದ್ದಾರೆ ಎಂದು ಹೇಳಲಾಗಿದೆ.

ಆಕೆಯ ಖಾತೆಯಿಂದ ಹಣವನ್ನು ವರ್ಗಾಯಿಸಿಕೊಂಡಿರುವುದಾಗಿ 2012 ರಲ್ಲಿ ಸಲ್ಲಿಸಲಾದ ಪೊಲೀಸ್ ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಆರೋಪಪಟ್ಟಿ ಸಲ್ಲಿಕೆಯಾದ ನಂತರವೂ ವಂಚಕರಿಗೆ ಖಾತೆ ವರ್ಗಾವಣೆ ಮಾಡಬಾರದೆಂಬ ಬಿಬಿಎಂಪಿ ನ್ಯಾಯಾಲಯದ ಆದೇಶ ಮತ್ತು ಕುಟುಂಬ ಸದಸ್ಯರ ಮನವಿಯ ನಡುವೆಯೂ ವರ್ಗಾವಣೆ ಮಾಡಲಾಗಿದೆ.

ಎರಡು ಹಂತಗಳಲ್ಲಿ ಸಂಪೂರ್ಣ ಆಸ್ತಿ ಖಾತಾಗಳನ್ನು ಫ್ರಾನ್ಸಿಸ್ ಮತ್ತು ಕೃಷ್ಣ ಅವರಿಗೆ ವರ್ಗಾಯಿಸಲಾಗಿದೆ ಎಂದು ಕುಟುಂಬದವರು ಆರೋಪಿಸಿದ್ದಾರೆ.

ತಾವು ವಂಚನೆಗೆ ಒಳಗಾಗಿದ್ದು, ಒಂದು ದಶಕದಿಂದಲೂ ನೋವು ಅನುಭವಿಸುತ್ತಿದ್ದೇವೆ, ನಮಗೆ ನ್ಯಾಯಾಂಗ ವ್ಯವಸ್ಥೆಯಲ್ಲಿ ಬಲವಾದ ನಂಬಿಕೆಯಿದೆ, ಮುಂದಿನ ಪೀಳಿಗೆ ಈ ವಂಚನೆ ಪರಿಣಾಮ ಅನುಭವಿಸಬಾರದು ಎಂಬ ಹಿನ್ನೆಲೆಯಲ್ಲಿ ಹೋರೋಟ ಮಾಡುವ ನಿರ್ಧಾರ ಕೈಗೊಂಡಿರುವುದಾಗಿ ಪದ್ಮನಾಭ ಅವರ ಪುತ್ರ ಹರೀಶ್ ಹೇಳಿದ್ದಾರೆ.

ಸ್ವಲ್ಪ ಸಮಯ ಜೈಲು ಶಿಕ್ಷೆ ಅನುಭವಿಸಿದ ವಂಚಕರು ಇನ್ನೂ ತಲೆಮರೆಸಿಕೊಂಡಿದ್ದು, ನಮ್ಮ ಕುಟುಂಬದ ಹೆಸರಲ್ಲಿ ಸಾಲ ಮಾಡಿದ್ದಾರೆ. ಬ್ಯಾಂಕುಗಳು ನಮ್ಮ ಬಳಿ ಬಂದು ತೊಂದರೆ ಕೊಡಬಹುದು ಎಂಬ ಆತಂಕದಲ್ಲಿ ನಾವು ಬದುಕುತ್ತಿದ್ದೇವೆ ಎಂದು ಅಳಲು ತೋಡಿಕೊಂಡಿದ್ದಾರೆ.

## ಶ್ರೀಶೈಲ ಪೀಠದ ಕಲ್ಯಾಣ ಮಂಟಪದ ಪ್ರಗತಿ ವೀಕ್ಷಿಸಿದ ಜಗದ್ಗುರು

ಸಿರುಗುಪ್ಪ : ನಗರದ ಪತಂಗೆ ಬ್ಯಾಂಕ್ವೆಟ್‌ನ ಸಭಾಂಗಣದಲ್ಲಿ ಶ್ರೀಶೈಲ ಜಗದ್ಗುರು ಡಾ.ಚನ್ನಸಿದ್ದರಾಮ ಪಂಡಿತರಾದ್ಯ ಶಿವಾಚಾರ್ಯ ಶ್ರೀಗಳು ಶ್ರೀಶೈಲ ಪೀಠದ ಉಸ್ತುವಾರಿಯಲ್ಲಿ ಪಿನಾಕಿನಿ ಆಶ್ರಮದಲ್ಲಿ ನಿರ್ಮಾಣವಾಗುತ್ತಿರುವ ಕಲ್ಯಾಣ ಮಂಟಪದ ಪ್ರಗತಿಯ ಬಗ್ಗೆ ಗುರುಬಸವ ಮಠದ ಶ್ರೀಬಸವ ಭೂಷಣ ಸ್ವಾಮೀಜಿ, ಹಾಗೂ ಮುಖಂಡರೊಂದಿಗೆ ಚರ್ಚಿಸಿದರು.

ನಂತರ ಪಿನಾಕಿನಿ ಆಶ್ರಮಕ್ಕೆ ಭೇಟಿ ನೀಡಿಕಲ್ಯಾಣ ಮಂಟಪಕಟ್ಟಡ ಕಾಮಗಾರಿಯ ಪ್ರಗತಿಯನ್ನು ವೀಕ್ಷಿಸಿದ ಶ್ರೀಗಳು ಕಲ್ಯಾಣ ಮಂಟಪದ ಆಯವ್ಯಯದ ಬಗ್ಗೆ ಮಾಹಿತಿ ಪಡೆದುಕೊಂಡರು.

ಇಂತಹ ಬೃಹತ್ ಕಟ್ಟಡದ ಕಾಮಗಾರಿಯನ್ನು ಪದೇ ಪದೇ ಮಾಡಲಾಗುವುದಿಲ್ಲ ಆದ್ದರಿಂದ ನಿರ್ಮಾಣದ ಹಂತದಲ್ಲೇ ಮಂಟಪಕ್ಕೆ ಅತ್ಯಗತ್ಯ ವಸ್ತುಗಳನ್ನು ಅಳವಡಿಸುವುದರೊಂದಿಗೆ ನಮ್ಮ ಪೀಠದ ವತಿಯಿಂದ ತಾಲೂಕಿನ ಜನತೆಗೆ ಉತ್ತಮದರ್ಜೆಯ ಭವನ ಅಥ–ವಾ ಮಂಟಪವನ್ನು ಅನುವು ಮಾಡಿ ಕೊಡಲಾಗುತ್ತಿದ್ದು, ಒಪ್ಪಂದದಂತೆಗುತ್ತಿಗೆದಾರರು ಉತ್ತಮವಾಗಿ



ನಿರ್ಮಿಸಿದ್ದಾರೆ.


ಇನ್ನುಳಿದ ಬಾಕಿ ಕೆಲಸಗಳಿಗಾಗಿ ಮುಂದಿನ ದಿನಗಳಲ್ಲಿ ಭಕ್ತರು ನೀಡುವ ದೇಣಿಗೆಯ ಮೂಲಕ ಸಂಗ್ರಹಿಸಿ ನಿರ್ಮಾಣ ಕಾರ್ಯವನ್ನು ಪರಿಪೂರ್ಣ ಗೊಳಿಸುವಂತೆ ಆಗಮಿಸಿದ್ದ ಮುಖಂಡರಿಗೆ ಹಾಗೂ ಉಸ್ತುವಾ–ರಿಗಳಾದ ಬಿ.ಆರ್.ಚನ್ನಬಸವನಗೌಡ, ಶಂಭುಲಿಂಗಯ್ಯ ಗಾಣದಾಳ್ ಅವರಿಗೆ ಸೂಚಿಸಿದರು.

ಇದೇ ವೇಳೆಗುತ್ತಿಗೆದಾರ ಮಹಾಲಿಂಗಯ್ಯ, ಮುಖಂಡರಾದ ಚೊಕ್ಕಬಸವನ ಗೌಡ, ಬಿ.ಎಮ್. ಯರಿಸ್ವಾಮಿ, ಬಿ.ಎಮ್.ಜಡಿಸ್ವಾಮಿ, ವೆಂಕಟರೆಡ್ಡಿ, ಗಿರೀಶ್‌ಗೌಡ, ಶಿವಶಂಕರ, ಇತರರು ಇದ್ದರು.

## ಏಳುಹಳ್ಳಿ ಕರಿಯಮ್ಮನ ವೈಭವಯುತ ರಥೋತ್ಸವ

ಹುಳಿಯಾರು: ಹುಳಿಯಾರು ಸಮೀಪದ ಚಿಕ್ಕಬಿದರೆ ಗ್ರಾಮದ ಏಳುಹಳ್ಳಿ ಕರಿಯಮ್ಮದೇವಿಯ ವೈಭವಯುತ ರಥ–ೋತ್ಸವ ಸೋಮವಾರದಂದು ಶ್ರೀ ರಂಗನಾಥ–ಸ್ವಾಮಿಯ ಸಮ್ಮುಖದಲ್ಲಿ ಸಕಲ ವಾದ್ಯಮೇಳ ಹಾಗೂ ಭಕ್ತರ ಹರ್ಷೋದ್ಗಾರದಲ್ಲಿ ವಿಜೃಂಭಣೆಯಿಂದ ಜರುಗಿತು.

ರಥೋತ್ಸವದ ಅಂಗವಾಗಿ ಮುಂಜಾನೆಯೇ ರಥಕ್ಕೆ ಪುಣ್ಯಾಹ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇ–ರಿಸಲಾಗಿತ್ತು. ಚಿಕ್ಕಬಿದರೆ ಕ–ರಿಯಮ್ಮ ಸೇರಿದಂತೆ ದೊಡ್ಡಬಿದರೆ ಕರಿಯಮ್ಮ,



ಪೋಚಕಟ್ಟೆ ಕರಿಯಮ್ಮ, ಕೋಡಿಹಳ್ಳಿ ಕೋಲ್ಲಾಪುರದಮ್ಮ ದೇವರುಗಳನ್ನು ಊರಿನಿಂದ ಗುಡಿಯವರೆವಿಗೂ ಭವ್ಯವಾದ ಉತ್ಸವದಲ್ಲಿ ಕರೆತರಲಾಯಿತು. ನಂತರ ದೇವರುಗಳನ್ನು ರಥ–ದಲ್ಲಿ ಕುಳ್ಳಿರಿಸಿದ ಭಕ್ತರು ಜೈಕಾರ ಹಾಕುತ್ತಾ ರಥವನ್ನೆಳೆದು ಭಕ್ತಿಭಾವ ಮೆರೆದರು.

ಮಹಾ ಮಂಗಳಾರತಿ, ಅನ್ನಸಂತರ್ಪಣೆ ನಡೆದ ನಂತರ ಕಂಕಣ ವಿಸರ್ಜನೆ, ಓಕಳಿಸೇವೆ ನಡೆಯಿತು. ಇದೇ ದಿನ ಸಂಜೆ ಗಂಡುಗತ್ತರಿ ಸೇವೆ, ಧ್ವಜ ಅವರೋಹಣ ನಡೆಸಲಾಯಿತು. ಅಕ್ಕಪಕ್ಕದ ಹಳ್ಳಿಗಳಿಂದ ಆಗಮಿಸಿದ್ದ ಭಕ್ತಾಧಿಗಳು ಅಮ್ಮನವರಿಗೆ ಹಣ್ಣುಕಾಯಿ ಮಾಡಿಸಿ, ದರ್ಶನ ಪಡೆದು ಕೃತಾರ್ಥರಾದರು.

## ಜಿಲ್ಲೆಯಾದ್ಯಂತ ರಾರಾಜಿಸುತ್ತಿರುವ ಬ್ಯಾನರ್ಗಳು




ಧಾರವಾಡ: ಮತದಾರರ ಜಾಗೃತಿ ಹಿನ್ನೆಲೆಯಲ್ಲಿ ಜಿಲ್ಲೆಯ ನಗರ ಪಟ್ಟಣಗಳಲ್ಲಿ ನೂರಾತು ಬೃಹತ್ ಪ್ರದರ್ಶನ ಫಲಕಗಳಲ್ಲಿ ಮತದಾರರ ಜಾಗೃತಿ ಕುರಿತಾದ ಬ್ಯಾನರ್ಗಳು ಸಾರ್ವಜನಿಕರ ಗಮನ ಸೆಳೆಯುತ್ತಿವೆ.

ಜಿಲ್ಲಾ ಪಂಚಾಯತ್ನ ಸ್ವೀಪ್ ಸಮಿತಿ ಅಡಿಯಲ್ಲಿ ವಾರ್ತಾ ಇಲಾಖೆಯ 50 ಫಲಕಗಳಲ್ಲಿ ಹಾಗೂ ಇನ್ನಿತರೇ ಇಲಾಖೆಗಳಿಗೆ ಸೇರಿದ ಹಲವರು ಫಲಕಗಳಲ್ಲಿ ಮತದಾರರ ಜಾಗೃತಿ ಬ್ಯಾನರ್ಗಳನ್ನು ಅಳವಡಿಸಲಾಗಿದೆ.

## ಕಂದಕಕ್ಕೆ ಉರುಳಿದ ಕಾರು: ಮಹಿಳೆ ಸಾವು
### ಪಂಚಾಯಿತಿ ಅಧ್ಯಕ್ಷೆ ಸೇರಿ ನಾಲ್ವರಿಗೆ ಗಾಯ

ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರ ಕುಟುಂಬ ಸದಸ್ಯರು ಪ್ರಯಾಣಿಸುತ್ತಿದ್ದ ಕಾರು ಕಮರಿಗೆ ಬಿದ್ದು ಮಹಿಳೆಯೊಬ್ಬರು ಮೃತಪಟ್ಟಿದ್ದು, ಉಜಿರೆ ಗ್ರಾಮ ಪಂಚಾಯಿತಿ ಮುಖ್ಯಸ್ಥೆ ಸೇರಿದಂತೆ ಐವರು ಗಾಯಗೊಂಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.



ಮೃತರನ್ನು ಉಜಿರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪುಷ್ಪಾವತಿ ಶೆಟ್ಟಿ ಅವರ ಸಂಬಂಧಿ ಸರೋಜಿನಿ ಶೆಟ್ಟಿ ಎಂದು ಗುರುತಿಸಲಾಗಿದೆ.

ರಾತ್ರಿ ಚಾರ್ಮಾಡಿ ಘಾಟ್‌ನ ಎರಡನೇ ತಿರುವಿನಲ್ಲಿ ಕಾರು ಕಮರಿಗೆ ಬಿದ್ದಿದ್ದು, ಅಪಘಾತದಲ್ಲಿ ಪಂಚಾಯಿತಿ ಮುಖ್ಯಸ್ಥೆ, ಅವರ ಪುತ್ರಿ ಪೂರ್ಣಿಮಾ ಶೆಟ್ಟಿ, ಮೊಮ್ಮಗ ಸಮೃದ್ಧ್, ಸಾಕ್ಷಿ ಮತ್ತು ಕಾರು ಚಾಲಕ ಅರುಣ್ ಗಾಯಗೊಂಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಇವರೆಲ್ಲರೂ ಶೃಂಗೇರಿಯ ಕೊಪ್ಪದಲ್ಲಿ ನಡೆದ ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡು ಹಿಂತಿರುಗುತ್ತಿದ್ದರು. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಅಪಘಾತ ಸಂಭವಿಸಿದ ತಕ್ಷಣ ಸ್ಥಳೀಯರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದರು. ಈ ದುರ್ಘಟನೆಯಲ್ಲಿ ಪುಷ್ಪಾವತಿ ಶೆಟ್ಟಿ ಅವರ ಕೈ ಮೂಳೆ ಮುರಿದಿದ್ದು, ಅವರ ಮಗಳ ತಲೆಗೆ ಗಾಯವಾಗಿದೆ ಎಂದು ಮೂಲಗಳು ತಿಳಿಸಿವೆ.

## ಗೇಲ್ ಪೈಪ್ ಲೈನ್ ಗ್ಯಾಸ್, ಸಿಎನ್‌ಜಿ ಬೆಲೆ ಕಡಿತ; ಪ್ರತಿ ಯೂನಿಟ್‌ಗೆ 7 ರೂ. ಇಳಿಕೆ

ಬೆಂಗಳೂರು: ಹೊಸ ದೇಶೀಯ



ಅನಿಲ ಬೆಲೆಯ ಪ್ರಯೋಜನಗಳನ್ನು ಗ್ರಾಹಕರಿಗೆ ವರ್ಗಾಯಿಸಲು ಕೇಂದ್ರ ಸರ್ಕಾರದ ಮಾರ್ಗಸೂಚಿಗಳಿಗೆ ಅನುಗುಣವಾಗಿ, ಗೇಲ್ ಗ್ಯಾಸ್ ಲಿಮಿಟೆಡ್ ತನ್ನ ಬೆಲೆ ಕಡಿತ ಮಾಡಿದೆ.

ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳು ಮತ್ತು ದಕ್ಷಿಣ ಕನ್ನಡದಲ್ಲಿ ಗೇಲ್ ಕಂಪನಿಯು ತನ್ನ ಡೊಮೆಸ್ಟಿಕ್ (ಗೃಹಬಳಕೆ) ಪೈಪ್ಡ್ ನ್ಯಾಚುರಲ್ ಗ್ಯಾಸ್ (ಪಿಎನ್‌ಜಿ) ಮತ್ತು ಕಂಪ್ರೆಸ್ಡ್ ನ್ಯಾಚುರಲ್ ಗ್ಯಾಸ್ (ಸಿಎನ್‌ಜಿ) ಬೆಲೆಗಳನ್ನು ಪ್ರತಿ ಯೂನಿಟ್‌ಗೆ 7 ರೂ.ಗಳಷ್ಟು ಕಡಿತಗೊಳಿಸುವುದಾಗಿ ಪ್ರಕಟಿಸಿದೆ.

ಪರಿಷ್ಕೃತ ಬೆಲೆಗಳು ಭಾನುವಾರದಿಂದಲೇ ಜಾರಿಗೆ ಬಂದಿದ್ದು, ಪ್ರತಿ ಸ್ಟಾಂಡರ್ಡ್ ಕ್ಯೂಬಿಕ್ ಮೀಟರ್‌ಗೆ (ಎಸ್‌ಸಿಎಂ) ಪಿಎನ್‌ಜಿಗೆ 51.50 ಮತ್ತು ಸಿಎನ್‌ಜಿಗೆ ಕೆಜಿಗೆ 82.50 ರೂ. "ಹೊಸ ಮಾರ್ಗಸೂಚಿಗಳು ಗ್ರಾಹಕರಿಗೆ ಸ್ಥಿರವಾದ ಬೆಲೆ ವ್ಯವಸ್ಥೆಯನ್ನು ಸ್ಥಾಪಿಸುವ ಗು–ರಿಯನ್ನು ಹೊಂದಿವೆ. ಸಿಎನ್‌ಜಿ ಮತ್ತು ಪಿಎನ್‌ಜಿಯನ್ನು ಆದ್ಯತೆಯ ಇಂಧನವಾಗಿ ಬಳಸುವುದರಿಂದ ಇಂಗಾಲದ ಹೆಜ್ಜೆಗುರುತನ್ನು ಕಡಿಮೆ ಮಾಡಲು ಮತ್ತು ಜೀವನದ ಗುಣಮಟ್ಟವನ್ನು ಸುಧಾರಿಸಲು ಸಹಾಯ ಮಾಡುತ್ತದೆ" ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

## ಹುಳಿಯಾರಿನಲ್ಲಿ ಪಂಜಿನ ಮೆರವಣಿಗೆ



ಹುಳಿಯಾರು: ಪ್ರತಿಯೊಬ್ಬರಲ್ಲಿ ಮತದಾನ ಜಾಗೃತಿ ಮೂಡಿಸಲು ತಾಲ್ಲೂಕು ಆಡಳಿತ ಹಾಗೂ ತಾಲ್ಲೂಕು ಸ್ವೀಪ್ ಸಮಿತಿ ಮತ್ತು ಪಟ್ಟಣ ಪಂಚಾಯ್ತಿಯಿಂದ ಪಟ್ಟಣದಲ್ಲಿ ರಾತ್ರಿ ಪಂಜಿನ ಮೆರವಣಿಗೆ ನಡೆಯಸಲಾಯಿತು.

'ಹಣಕ್ಕೆ ಮತ ಮಾರಿಕೊಳ್ಳಬೇಡಿ, 'ಯುವ ಮತದಾರರು ನಿಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಿ', 'ಮತದಾನ ನಮ್ಮ ಹಕ್ಕು' ಎನ್ನುವ ಘೋಷಣೆಗಳನ್ನು ಕೂಗುತ್ತಾ ವಿಜಯನಗರ ಬಡಾವಣೆಯಲ್ಲಿ ಮೆರವಣಿಗೆ ಮಾಡಲಾಯಿತು. ಇದೇ ವೇಳೆ ಯಾವುದೇ ಆಮೀಷಗಳಿಗೆ ಒಳಗಾಗದೆ ನೈಜವಾಗಿ ಮತ ಚಲಾಯಿಸುತ್ತೇವೆ ಎಂದು ಮತದಾರರಲ್ಲಿ ಪ್ರತಿಜ್ಞಾವಿಧಿ ಸ್ವೀಕಾರ ಮಾಡಿಸಲಾಯಿತು.

ಪಪಂ ಮುಖ್ಯಾಧಿಕಾರಿ ಡಿ.ಭೂತಪ್ಪ ಅವರು ಮಾತನಾಡಿ ದಾನಗಳಲ್ಲಿ ಶ್ರೇಷ್ಠದಾನ ಮತದಾನ. ಪ್ರಜಾಪ್ರಭುತ್ವದಲ್ಲಿ ಪ್ರತಿಯೊಬ್ಬರಿಗೂ ಮತದಾನದ ಹಕ್ಕನ್ನು ಸಂವಿಧಾನ ಕೊಟ್ಟಿದ್ದು, ಅದು ಸದುಪಯೋಗ ವಾಗಬೇಕಾದರೆ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು.

ಮೇ 10 ರಂದು ವಿಧಾನಸಭೆ ಚುನಾವಣೆ ನಡೆಯುತ್ತಿದ್ದು, ತಪ್ಪದೆ ಎಲ್ಲರೂ ತಮ್ಮ ಹಕ್ಕು ಚಲಾಯಿಬೇಕು.

ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಬಿಟ್ಟು ಹೋಗಿದ್ದಲ್ಲಿ, ಬಿಎಲ್‌ಒಗಳನ್ನು ಭೇಟಿ ಮಾಡಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವ ಬಗ್ಗೆ ಖಚಿತ ಪಡಿಸಿಕೊಳ್ಳಲು ಅವರು ತಿಳಿಸಿದರು.

ಪಟ್ಟಣ ಪಂಚಾಯ್ತಿಯ ಆನಂದ್, ಎಂ.ರಾಘವೇಂದ್ರ ಪೌರಕಾರ್ಮಿಕರಾದ ನಾಗರಾಜು, ಡಿ.ಪಾಂಡಯ್ಯ, ಸಣ್ಣಹನುಮಂತಯ್ಯ, ಟಿ.ರಾಜಣ್ಣ, ಸಾಧಿಕ್, ರಂಗಲಕ್ಷ್ಮಿ, ರಾಮಕ್ಕ, ಬಸಮ್ಮ ಮತ್ತಿತರರು ಇದ್ದರು.

## ಸಿರಿಗೇರಿ ಗ್ರಾ.ಪಂ.ನಿಂದ ಮತದಾನ ಜಾಗೃತಿ ಜಾಥಾ



ಸಿರುಗುಪ್ಪ: ಸಿರುಗುಪ್ಪ ತಾಲೂಕಿನ ಸಿರಿಗೇರಿ ಗ್ರಾಮದಲ್ಲಿಗ್ರಾಮ ಪಂಚಾಯಿತಿ ಕಛೇರಿಯಿಂದ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮತದಾನ ಅರಿವು ಮೂಡಿಸಲು ಹಮ್ಮಿಕೊಳ್ಳಲಾದ ಜಾಗೃತಿ ಜಾಥಾದಲ್ಲಿ ಸಾರ್ವಜನಿಕ–ರಿಗೆ ಕಡ್ಡಾಯವಾಗಿ ಮತದಾನ ಮಾಡಿ ಹಾಗೂ ಮಾಡಿಸಿ ಎಂಬ ಮತದಾನದಅರಿವು ಮೂಡಿಸಲಾಯಿತು.

ಇದೇ ವೇಳೆ ಗ್ರಾ.ಪಂ ಕಾರ್ಯದರ್ಶಿ ವೀರೇಶ್, ಮುಖ್ಯಶಿಕ್ಷಕ ಸತೀಶ್‌ಕುಮಾರ್, ಗ್ರಾ.ಪಂ ಸಿಬ್ಬಂದಿಗಳಾದ ರುದ್ರೇಶ್, ನಾಗರಾಜ್, ಲಿಂಗಪ್ಪ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಇದ್ದರು.

## ಮತದಾರರ ಜಾಗೃತಿ: ಬೈಕ್ ರ್‍ಯಾಲಿಗೆ ಚಾಲನೆ

ಧಾರವಾಡ: ಮತದಾರರ ಜಾಗೃತಿಗಾಗಿ ಜಿಲ್ಲಾಧಿಕಾರಿಗಳ ಕಚೇರಿಯೆದುರು ಆರಂಭಗೊಂಡ ಬೈಕ್ ರ್‍ಯಾಲಿಗೆ ಜಿಲ್ಲಾ ಪಂಚಾಯತ್ ಸಿಇಓ ಸ್ವರೂಪ ಟಿ.ಕೆ. ಅವರು ಚಾಲನೆ ನೀಡಿದರು. ಜಿಲ್ಲಾ ಪಂಚಾಯತ್, ಜಿಲ್ಲಾ ನೌಕರರ ಸಂಘ ಹಾಗೂ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಂಯುಕ್ತಾಶ್ರಯದಲ್ಲಿ ನೂರಾರು ನೌಕರರು ಬೈಕ್ ರ್‍ಯಾಲಿಯಲ್ಲಿ ಪಾಲ್ಗೊಂಡು ಮತದಾನದ ಕುರಿತು ಅರಿವು ಮೂಡಿಸಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ, ಯೋಜನಾ ನಿರ್ದೇಶಕ ಪಿ.ಎಸ್.



ಮೂಗನೂರಮಠ, ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳ, ಜಿಲ್ಲಾ ಆರೋಗ್ಯಾಧಿಕಾರಿ ಶಶಿ ಪಾಟೀಲ ಸೇ–ರಿದಂತೆ ಹಲವರು ಪಾಲ್ಗೊಂಡಿದ್ದರು.

## ರೋಗಗಳಿಗಿಂತ ಮನುಷ್ಯನ ದ್ವೇಷ, ಅಸೂಯೆಗಳು ಅಪಾಯಕಾರಿ

**ಮಹಾಲಿಂಗಪುರ:** ಕತೆ ಇದು ಸೃಜನಶೀಲ ಪ್ರಕ್ರಿಯೆ. ಕತೆ ಬರೆಯುವವರಿಗೆ ಸಂಯಮ, ತಾಳ್ಮೆ ಅವಶ್ಯಕ.

ಕತೆಗಾರ ಮಲ್ಲಿಕಾರ್ಜುನ ಶೆಲ್ಲಿಕೇರಿ ಅವರ ದೀಡೆಕರೆ ಜಮೀನ ಕೃತಿಯಲ್ಲಿ ಬರುವ ಕತೆಗಳು ವಿಶಿಷ್ಟವಾಗಿವೆ.

ಗ್ರಾಮೀಣ ಸೊಗಡು, ಅಲ್ಲಿಯ ಜೀವನ, ತಲ್ಲಣ ಅಷ್ಟೇ ಅಲ್ಲ, ರೋಗಗಳಿಗಿಂತ ಮನುಷ್ಯನ ದ್ವೇಷ, ಅಸೂಯೆಗಳು ಅಪಾಯಕಾರಿ ಎಂಬ ಸತ್ಯವನ್ನು ಬಿಚ್ಚಿಡುತ್ತವೆ ಎಂದು ತೇರದಾಳದ ಕತೆಗಾರ ಕಲ್ಲೇಶ ಕುಂಬಾರ ಹೇಳಿದರು.

ಮಹಾಲಿಂಗಪುರದ ಹಿರಿಯ ಸಾಹಿತಿಗಳಾದ ಗುರುರಾಜ ಖಾಸನೀಸ ಅವರ ನಿವಾಸದಲ್ಲಿ ರವಿವಾರ ಸಂಜೆ ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕ ಬಾಗಲಕೋಟೆ, ತಾಲೂಕು ಘಟಕ ರಬಕವಿ–ಬನಹಟ್ಟಿ, ವಲಯಗಳು ತೇರದಾಳ ಮಹಾಲಿಂಗಪುರ ಇವರ ಸಂಯುಕ್ತಾಕ್ಷರದಲ್ಲಿ ನಡೆದ ಪುಸ್ತಕಾವಲೋಕನ – 16 ಕಾರ್ಯಕ್ರಮದಲ್ಲಿ ಬಾಗಲಕೋಟೆ ನಗರಾಭಿವೃದ್ಧಿ ಪ್ರಾಧಿಕಾರದ ಸಿಎಓ ಮಲ್ಲಿಕಾರ್ಜುನ ಶೆಲ್ಲಿಕೇರಿ ಅವರ ದೀಡೆಕರೆ ಜಮೀನು ಕೃತಿ ಅವಲೋಕಿಸಿ ಮಾತನಾಡಿದರು.

ಹಿರಿಯ ಸಾಹಿತಿ ಗುರುರಾಜ ಖಾಸನೀಸ ಅಧ್ಯಕ್ಷತೆ ವಹಿಸಿ ಪುಸ್ತಕಗಳನ್ನು ಕೊಂಡು ಓದುವ ಹವ್ಯಾಸ ಬೇಕು. ಶೆಲ್ಲಿಕೇ–ರಿಯವರ ದೀಡೆಕರೆ ಜಮೀನು




ಕೃತಿ ಗಮನಾರ್ಹ ಕತೆಗಳಿಂದ ಓದುಗರನ್ನು ಸೆಳೆಯುತ್ತದೆ. ಸಾಹಿತ್ಯಿಕ ಕಾರ್ಯಕ್ರಮಗಳಿಗೆ ಸದಾ ಸಹಕಾರ ನೀಡಲಾಗುವುದು ಎಂದರು.

ಕೃತಿಕಾರ ಮಲ್ಲಿಕಾರ್ಜುನ ಶೆಲ್ಲಿಕೇರಿ ಮಾತನಾಡಿ, ದೀಡೆಕರೆ ಜಮೀನು ಇದು ನನ್ನ ಮೊದಲ ಕಥಾ ಸಂಕಲನವಾಗಿದೆ. ಬಿಡುಗಡೆಯಾದ ಕೆಲವೇ ದಿನಗಳಲ್ಲಿ ವಿಮರ್ಶಕರ, ಓದುಗರ ಮೆಚ್ಚುಗೆ ಗಳಿಸಿರುವುದಕ್ಕೆ ಸಂತಸವಾಗಿದೆ. ಕಾದಂಬರಿ ಬರೆಯಲು ತಾವು ನಿರ್ಧರಿಸಿರುವ ಬಗ್ಗೆ ಹೇಳಿದರು.

ಬನಹಟ್ಟಿಯ ವಿನೋದ ಸಾಹಿತಿ ಮಲ್ಲಿಕಾರ್ಜುನ ಹುಲಗಬಾಳಿ, ಮಕ್ಕಳ ಸಾಹಿತಿ ಜಯವಂತ ಕಾಡದೇವರ, ಶಿವಾನಂದ ದಾಶಾಳ, ನಿವೃತ್ತ ಉಪನ್ಯಾಸಕ ಎಂ.ಎಸ್.ಬದಾಮಿ, ಜಿ.ಎಸ್. ವಡಗಾಂವಿ ಮಾತನಾಡಿದರು.

ಕಸಾಪ ತಾಲೂಕಾಧ್ಯಕ್ಷ ಮ. ಕೃ.ಮೇಗಾಡಿ ಪುಸ್ತಕಾವಲೋಕನ ಪ್ರತಿ ತಿಂಗಳು ಯಶಸ್ವಿಯಾಗಿ ನೆರವೇರುತ್ತಿದೆ. ಕಸಾಪ ಕಾರ್ಯಚಟುವಟಿಕೆಗಳು ನಿರಂತರ ನಡೆಯಲು ಪ್ರೋತ್ಸಾಹ, ಹಿರಿಯ ಸಾಹಿತಿಗಳು, ಕನ್ನಡ ಮನಸ್ಸುಗಳು ಭಾಗವಹಿಸುತ್ತಿರು ವುದು ಕಾರ್ಯಕ್ರಮ ಆಯೋಜಿಸಲು ಸಹಕಾರಿಯಾಗಿದೆ ಎಂದರು.

ಕಸಾಪ ಮಹಾಲಿಂಗಪುರ ವಲಯಾಧ್ಯಕ್ಷ ಬಸವರಾಜ ಮೇಟಿ ಪ್ರಾರ್ಥಿಸಿದರು. ತೇರದಾಳ ಕಸಾಪ ವಲಯಾಧ್ಯಕ್ಷ ಗಂಗಾಧರ ಮೋಪಗಾರ ನಿರೂಪಿಸಿದರು. ಕಸಾಪ ತಾಲೂಕು ಗೌರವ ಕಾರ್ಯದರ್ಶಿ ಮಹೇಶ ಮನ್ನಯ್ಯನವರಮಠ ವಂದಿಸಿದರು.

ಮಹಾಲಿಂಗಪುರ ಪುರಸಭೆ ಮಾಜಿ ಅಧ್ಯಕ್ಷ ಜಿ.ಎಸ್. ಗೊಂಬಿ, ಶ್ರೀಶೈಲಪ್ಪಣ್ಣ ಉಳ್ಳಾಗಡ್ಡಿ, ರಬಕವಿ ವಿನೋದ ಸಾಹಿತಿ ಯಶವಂತ ವಾಜಂತ್ರಿ, ಮೃತ್ಯುಂ–ಜಯ ರಾಮದುರ್ಗ, ಗೋಲೇಶ ಅಮ್ಮಣಗಿ, ಕಲ್ಲಪ್ಪಣ್ಣ ಚಿಂಚಲಿ, ಸದಾಶಿವ ದೊಡ್ಡಪ್ಪಗೋಳ, ಎಸ್. ಎಂ.ಅಣ್ಣಿಗೇರಿ, ಅನೀಲ ಗುನ್ನಾಪುರ, ಪತ್ರಕರ್ತ ರಾಮು ಕಾಡಾಪುರ, ಕೆ.ಎಸ್.ರಂಗಸ್ವಾಮಿ, ಎಸ್.ಆರ್. ರಾವಳ ಪಾಲ್ಗೊಂಡಿದ್ದರು.

## ವಿಧಾನಸಭೆ ಚುನಾವಣೆ: ನೋಡಲ್ ಅಧಿಕಾರಿಗಳ ಸಭೆ

# ಸಮರ್ಪಕ ಸಿದ್ಧತೆಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ



**ಬೆಳಗಾವಿ:** ವಿಧಾನಸಭಾ ಚುನಾವಣೆ ಪ್ರಕ್ರಿಯೆಯನ್ನು ಸುಗಮವಾಗಿ ನಡೆಸಲು ಅನುಕೂಲವಾಗುವಂತೆ ಎಂ.ಸಿ.ಸಿ. ಸೇರಿದಂತೆ ನೇಮಿಸಲಾಗಿರುವ ವಿವಿಧ ನೋಡಲ್ ಅಧಿಕಾರಿಗಳು ತಮಗೆ ವಹಿಸಲಾಗಿರುವ ಕೆಲಸಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸೋಮವಾರ (ಏ.10) ನಡೆದ ನೋಡಲ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾದರಿ ನೀತಿ ಸಂಹಿತೆ, ತರಬೇತಿ, ಸಾರಿಗೆ ನಿರ್ವಹಣೆ, ಗಣಕೀಕರಣ, ಸೈಬರ್ ಭದ್ರತೆ, ಸ್ವೀಪ್, ಇವಿಎಂ ನಿರ್ವಹಣೆ, ದೂರುಗಳ ಪರಿಹಾರ ಸೇರಿದಂತೆ ವಿವಿಧ ನೋಡಲ್ ಅಧಿಕಾರಿಗಳನ್ನು ಚುನಾವಣಾ ಕೆಲಸಕ್ಕೆ ನಿಯೋಜಿಸಿ ಅಗತ್ಯ ತರಬೇತಿ ಮತ್ತು ಉಪಕರಣಗಳನ್ನು ಕೂಡ ನೀಡಲಾಗಿರುತ್ತದೆ.

ಇದಲ್ಲದೇ ಪ್ರತಿ ತಂಡಕ್ಕೂ ಅಗತ್ಯ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಈ ತಂಡವನ್ನು ಸರಿಯಾಗಿ ಬಳಸಿಕೊಂಡು ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಪ್ರತಿಯೊಂದು ಕೆಲಸವನ್ನು ಅಚ್ಚುಕಟ್ಟಾಗಿ ಮಾಡಬೇಕು.

ಮತದಾನ ದಿನ ಸಮೀಪಿಸಿದಂತೆ ಪ್ರತಿಯೊಬ್ಬರಿಗೂ ಕೆಲಸದ ಒತ್ತಡ ಹೆಚ್ಚಾಗುತ್ತದೆ. ಆದ್ದರಿಂದ ಪ್ರತಿಯೊಂದು ವಿಷಯವನ್ನು ಸೂಕ್ಷ್ಮವಾಗಿ ಪರಿಶೀಲಿಸಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಹೇಳಿದರು.

ಮಸ್ಟರಿಂಗ್, ಡಿಮಸ್ಟರಿಂಗ್ ಹಾಗೂ ಮತದಾನ ದಿನಗಳಂದು ಯಾವುದೇ ರೀತಿಯ ಗೊಂದಲಗಳಿಗೆ ಆಸ್ಪದ ಉಂಟಾಗದಂತೆ ಪ್ರತಿಯೊಂದು ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಸಿದ್ಧತೆ ಮಾಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಆಯಾ ಸಂದರ್ಭಕ್ಕೆ ಬೇಕಾದ ಲೇಖನ, ಮುದ್ರಣ ಸಾಮಗ್ರಿಗಳನ್ನು ದಾಸ್ತಾನು ಮಾಡಿಕೊಳ್ಳಬೇಕು. ಸಾರಿಗೆ, ಊಟೋಪಹಾರದ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ, ಪರಶುರಾಮ್ ದುಡಗುಂಟಿ, ಲಕ್ಷ್ಮಣ ಬಬಲಿ, ನಿಸಾರ್ ಅಹಮದ್, ರಾಜಶ್ರೀ ಜೈನಾಪುರ, ಶ್ರೀಶೈಲ್ ಕಂಕಣವಾಡಿ, ಪ್ರೀತಂ ನಸಲಾಪುರೆ, ರವಿ ಬಂಗಾರೆಪ್ಪನವರ, ಗುರುನಾಥ ಕಡಬೂರ ಸೇರಿದಂತೆ ವಿವಿಧ ಸಮಿತಿಗಳ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಚುನಾವಣೆಗೆ ಸಂಬಂಧಿಸಿದಂತೆ ಸಿದ್ಧತೆಗಳನ್ನು ನೋಡಲ್ ಅಧಿಕಾರಿಗಳು ಸಭೆಯಲ್ಲಿ ವಿವರಿಸಿದರು.

# ಸಚಿವೆ ಶಶಿಕಲಾ ಜೊಲ್ಲೆಗೆ ಘೇರಾವ್ ಹಾಕಿದ ಗಲಟಗಾ ಗ್ರಾಮಸ್ಥರು



ಬೆಳಗಾವಿ: ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲ ಎಂದು ಆರೋಪಿಸಿ ಸಚಿವೆ ಶಶಿಕಲಾ ಜೊಲ್ಲೆ ಅವರನ್ನು ಗ್ರಾಮಕ್ಕೆ ಪ್ರವೇಶಿಸದಂತೆ ಸ್ಥಳೀಯರು ತಡೆಹಿಡಿದಿರುವ ಘಟನೆ ಚಿಕ್ಕೋಡಿ ತಾಲೂಕಿನ ಗಲಟಗಾ ಗ್ರಾಮದಲ್ಲಿ ನಡೆದಿದೆ.

ಸಚಿವೆ ಜೊಲ್ಲೆ ಗ್ರಾಮಕ್ಕೆ ಭೇಟಿ ನೀಡುವುದನ್ನು ವಿರೋಧಿಸಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಈ ಪ್ರದೇಶದಲ್ಲಿ ಅಭಿವೃದ್ಧಿ ಕಾರ್ಯಗಳು ಮತ್ತು ಮೂಲ ಸೌಕರ್ಯಗಳನ್ನು ಸರ್ಕಾರ ಮಾಡಿಲ್ಲ ಎಂದು ಶಶಿಕಲಾ ಜೊಲ್ಲೆ ಬರುತ್ತಿರುವ ವೇಳೆ ಗ್ರಾಮಸ್ಥರು ಆರೋಪಿಸಿ ಬರದಂತೆ ತಡೆದರು ಎಂದು ಹೇಳಲಾಗುತ್ತಿದೆ.

ಗ್ರಾಮಸ್ಥರು ಆಕ್ರೋಶ ಹೊರಹಾಕುತ್ತಾ ಸಚಿವೆಯನ್ನು ಸುತ್ತುವರೆದು, ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಕೆಲಸ ಮಾಡುತ್ತಿಲ್ಲ ಎಂದು ಆರೋಪಿಸಿದರು.

ಇದುವರೆಗೆ ಇತ್ತ ಸುಳಿದಿರದ ಸಚಿವೆ ಇಂದು ಬರುತ್ತಿದ್ದಾರೆ ಎಂದು ಗ್ರಾಮಸ್ಥರು ಆಕ್ರೋಶ ಹೊರಹಾಕಿದರು. ಇದರಿಂದ ಬಿಜೆಪಿ ಸಚಿವೆ ಶಶಿಕಲಾ ಜೊಲ್ಲೆ ಅವರಿಗೆ ಭಾರೀ ಮುಜುಗರವಾಗಿದೆ.

# ಖಾನಾಪೂರ: ಮತದಾನ ಜಾಗೃತಿಗಾಗಿ ಬೈಕ್ ರ್ಯಾಲಿ



ಖಾನಾಪೂರ: ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಖಾನಾಪೂರ ತಾಲ್ಲೂಕು ಸ್ವೀಪ್ ಸಮಿತಿ ಸಹಯೋಗದಲ್ಲಿ ಮತದಾರರಿಗೆ ಮತದಾನದ ಕುರಿತು ಅರಿವು ಮೂಡಿಸಲು ಖಾನಾಪೂರ ಪಟ್ಟಣ ಸೇರಿದಂತೆ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಸೋಮವಾರ ಬೈಕ್ ರ್ಯಾಲಿ ಹಾಗೂ ಮತದಾನ ಜಾಗೃತಿ ವಾಹಿನಿ ಸಂಚಾರ ನಡೆಸಲಾಯಿತು.

ಪಟ್ಟಣದ ಕಿಲ್ಲಾ ಸರ್ಕಲ್ ನಲ್ಲಿ ಹಮ್ಮಿಕೊಂಡಿದ್ದ ಬೈಕ್ ರ್ಯಾಲಿ ಹಾಗೂ ಮತದಾನ ಜಾಗೃತಿ ವಾಹಿನಿಗೆ ಮತಕ್ಷೇತ್ರದ ಚುನಾವಣಾಧಿಕಾರಿ ಅನುರಾಧಾ ವಸ್ತ್ರದ ಹಾಗೂ ಸಹಾಯಕ ಚುನಾವಣಾಧಿಕಾರಿ ಪ್ರಕಾಶ ಗಾಯಕವಾಡ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಚುನಾವಣಾಧಿಕಾರಿ ಅನುರಾಧಾ ವಸ್ತ್ರದ ಮಾತನಾಡಿ, ಮತದಾನ ಮಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ. ಮತದಾನದಿಂದ ಸುಭದ್ರ ಪ್ರಜಾಪ್ರಭುತ್ವ ರಾಷ್ಟ್ರ ನಿರ್ಮಾಣ ಮಾಡಲು ಸಾಧ್ಯವಿದೆ. ಹೀಗಾಗಿ, ಮೇ 10 ರಂದು ನಡೆಯಲಿರುವ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಎಲ್ಲ ಮತದಾರರು ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಹೇಳಿದರು.

ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರಾದ ವೀರನಗೌಡ ಏಗನಗೌಡರ್ ಮಾತನಾಡಿ, ಈ ಬಾರಿ ಮತದಾನ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸ್ವೀಪ್ ಸಮಿತಿಯಿಂದ ತಾಲ್ಲೂಕಿನಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿ ಜಾಗೃತಿ ಮೂಡಿಸಲಾಗುತ್ತಿದೆ. ಯಾರೂ ಕೂಡ ಮತದಾನದಿಂದ ಹೊರಗುಳಿಯಬಾರದು. ಜೊತೆಗೆ ಮತದಾರರು ಯಾವುದೇ ಆಸೆ, ಆಮಿಷಗಳಿಗೆ ಮರುಳಾಗದೇ ಪ್ರಾಮಾಣಿಕವಾಗಿ ಮತ್ತು ನಿರ್ಭಯವಾಗಿ ಮತ ಚಲಾಯಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಪಂ ಸಹಾಯಕ ನಿರ್ದೇಶಕರಾದ ದೇವರಾಜ್ ಎಂ.ಜಿ., ಶೇಖರ್ ಹಿರೇಸೋಮಣ್ಣವರ್ ಸೇರಿದಂತೆ ತಾಲ್ಲೂಕು ಪಂಚಾಯತ ಹಾಗೂ ತಹಶೀಲ್ದಾರ್ ಕಚೇರಿಯ ಅಧಿಕಾರಿಗಳು, ಸಿಬ್ಬಂದಿ, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಹಾಜರಿದ್ದರು.

# ಉಚಿತ ಮಾನಸಿಕ ಆರೋಗ್ಯ ತಪಾಸಣೆ



ಬೆಳಗಾವಿ: ಕೆ.ಎಲ್.ಇ. ಅಕಾಡೆಮಿಆಫ್ ಹೈಯರ್ ಎಜುಕೇಶನ್ & ರೀಸರ್ಚ (ಕೆ.ಎಲ್.ಇ. ಸ್ವಾಯತ್ತ ವಿಶ್ವವಿದ್ಯಾಲಯ) ಬೆಳಗಾವಿಯ ಕೌನ್ಸಿಲಿಂಗ್ ಸೆಲ್ ಮತ್ತು ಮನೋವಿಜ್ಞಾನ ವಿಭಾಗ ಜೆ.ಎನ್.ಎಮ್.ಸಿ ವತಿಯಿಂದ ಮಹಿಳಾ ಕಲ್ಯಾಣ ಸಂಸ್ಥೆಯ (ಡಬ್ಲ್ಯು,ಡಬ್ಲ್ಯು,ಎಸ್) ಉಜ್ವಲ ಪುನರ್ವಸತಿ ಕೇಂದ್ರದಲ್ಲಿ ಉಚಿತ ಶಿಬಿರವನ್ನು ಹಮ್ಮಿಕೋಳ್ಳಲಾಗಿತ್ತು.

ಅದರಲ್ಲಿ ಸಾಮಾಜಿಕ ಸಂತ್ರಸ್ತ ಮಕ್ಕಳು, ವೃದ್ಧರು ಹಾಗೂ ಮಹಿಳೆಯರಿಗಾಗಿ ಉಚಿತ ಮಾನಸಿಕ ಆರೋಗ್ಯ ತಪಾಸಣೆ, ಆರೋಗ್ಯ ತಪಾಸಣೆ& ಮಾನಸಿಕ ಆಪ್ತ ಸಮಾಲೋಚನೆ ಸೇವೆಯನ್ನು ಒದಗಿಸಲಾಯಿತು.

ಕೆ.ಎಲ್.ಇ. ಸ್ವಾಯತ್ತ ವಿಶ್ವ ವಿದ್ಯಾಲಯದ ಆಪ್ತಸಮಾಲೋಚಕರು ಹಾಗೂ ಮನೋವಿಜ್ಞಾನ ವಿಭಾಗದ ಮುಖ್ಯಸ್ಥರಾದ ಡಾ. ಯಾಸ್ಮಿನ್ ಡಿ.ಎನ್. ಅವರು "ಮಾನಸಿಕ ಆರೋಗ್ಯ ಮತ್ತುಅದರ ನಿರ್ವಹಣೆ ಎಲ್ಲರಿಗೂ ಆರೋಗ್ಯ" ದ ಬಗ್ಗೆ ಮಾತನಾಡಿದರು.

ಶ್ರೀಮತಿ ಸುರೇಖಾ (ಡಬ್ಲ್ಯು,ಡಬ್ಲ್ಯು,ಎಸ್) &ಇತರ ಸಿಬ್ಬಂದಿ ಉಪಸ್ಥಿತರಿದ್ದರು.

ಸಮಾಜ ಸೇವೆ ಹಾಗು ಮಹಿಳಾ ಹಾಗೂ ಮಕ್ಕಳ ಆರೋಗ್ಯ ಹಾಗೂ ಅಭಿವ್ರದ್ಧಿಯ ನಿಟ್ಟಿನಲ್ಲಿ 70 ಕ್ಕೂ ಹೆಚ್ಚು ಜನರಿಗೆ ಮಾನಸಿಕ ಆರೋಗ್ಗದಕುರಿತು ಸೇವೆಯನ್ನು ಒದಗಿಸಲಾಯಿತು.

ಮನೋವಿಜ್ಞಾನ ವಿಭಾಗದ ಸಿಬ್ಬಂಧಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು, ಕಮ್ಯೂನಿಟಿ ಮೇಡಿಸಿನ್ ಜೆ.ಎನ್.ಎಮ್.ಸಿ ವಿಭಾಗದ ಸ್ನಾತಕೋತ್ತರ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## 1ಕೋಟಿಗೂ ಅಧಿಕ ವಿದೇಶಿ ಹಣ ಸಾಗಾಟ: ಮೂವರ ಬಂಧನ



ಬೆಂಗಳೂರು: ವಿದೇಶಕ್ಕೆ ಅಕ್ರಮವಾಗಿ ಸಾಗಿಸುತ್ತಿದ್ದ ಒಂದು ಕೋಟಿಗೂ ಅಧಿಕ ವಿದೇಶಿ ಹಣವನ್ನ ಏರ್ಪೋರ್ಟ್ ಭದ್ರತಾ ಸಿಬ್ಬಂದಿಯು ವಶಕ್ಕೆ ಪಡೆದಿರುವ ಘಟನೆ ಬೆಂಗಳೂರಿನ ಕೆಂಪೇಗೌಡ ಏರ್ಪೋರ್ಟ್ನಲ್ಲಿ ನಡೆದಿದೆ.

ಕೆಂಪೇಗೌಡ ಏರ್ಪೋರ್ಟ್ನಿಂದ ಬ್ಯಾಂಕಾಕ್ಗೆ ಸಾಗಾಟ ಮಾಡುತ್ತಿದ್ದ ವೇಳೆ, ಮೂವರು ಪ್ರಯಾಣಿಕರಿಂದ 1.41ಕೋಟಿ ರೂ. ವಶಕ್ಕೆ ಪಡೆದಿದ್ದಾರೆ. ಯುಎಸ್ಡಿ, ಯುರೋ, ಸ್ವಿಸ್, ಪ್ರಾನ್ಸ್, ಮತ್ತು ಥಾಯ್ ದೇಶದ ಕರೆನ್ಸಿ ಇದಾಗಿದೆ. ಬ್ಯಾಗ್ನಲ್ಲಿಟ್ಟುಕೊಂಡು ವಿಮಾನ ಹತ್ತುವ ಮುನ್ನ ಸೆಕ್ಯುರಿಟಿ ಚೆಕಿಂಗ್ ಸಂದರ್ಭದಲ್ಲಿ ಮೂವರು ಆರೋಪಿಗಳ ಸಮೇತ ಹಣವನ್ನ ವಶಪಡಿಸಿಕೊಂಡು ತನಿಖೆ ನಡೆಸಿದ್ದಾರೆ.

# ಆರೋಗ್ಯ ಶಿಬಿರದಲ್ಲಿ ಮತದಾನ ಜಾಗೃತಿ



ಬೈಲಹೊಂಗಲ: ತಾಲೂಕು ಸ್ವೀಪ್ ಸಮಿತಿ ಬೈಲಹೊಂಗಲ ಹಾಗೂ ಪಂಚಾಯತ ರಾಜ್ ಇಲಾಖೆ ಮತ್ತು ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಬೈಲಹೊಂಗಲ ತಾಲೂಕಿನ ನಾಗನೂರ ಗ್ರಾಮ ಪಂಚಾಯತ ವ್ಯಾಪ್ತಿಯ ಸಮುದಾಯ ಆರೋಗ್ಯ ಕೇಂದ್ರ ನಾಗನೂರದಲ್ಲಿ ಸಾರ್ವತ್ರಿಕ ಚುನಾವಣೆ 2023 ರ ನಿಮಿತ್ಯವಾಗಿ ಉದ್ಯೋಗ ಖಾತ್ರಿ ಕೂಲಿಕಾರರಿಗೆ ಹಾಗೂ ಸಾರ್ವಜನಿಕರಿಗೆ ಆರೋಗ್ಯ ಶಿಬಿರವನ್ನು ಆಯೋಜನೆ ಮಾಡುವ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಶ್ರೀ ಎಸ್ ಎಸ್ ಸಂಪಗಾವಿ ಅಧ್ಯಕ್ಷರು ತಾಲೂಕಾ ಸ್ವೀಪ್ ಸಮಿತಿ ಬೈಲಹೊಂಗಲ ರವರು ಚಾಲನೆ ನೀಡಿದರು.

ಸಂಪಗಾಂವಿ ರವರು ಮಾತನಾಡಿ ಪ್ರತಿಯೊಬ್ಬ ವ್ಯಕ್ತಿಗೆ ಆರೋಗ್ಯವು ಬಹಳ ಉಪಯುಕ್ತ ಹಾಗೂ ಆಧುನಿಕ ಆಹಾರದ ಮೊರೆಯಿಂದ ಹೊರಗುಳಿದು ಉತ್ತಮ ಆರೋಗ್ಯಕ್ಕಾಗಿ ಮತ್ತು ಉತ್ತಮ ಭವಿಷ್ಯಕ್ಕಾಗಿ ಆರೋಗ್ಯವು ಎಷ್ಟು ಮುಖ್ಯವೋ ಅಷ್ಟೇ ಮತದಾನವು ಮುಖ್ಯ ಮತ್ತು ಯಾವುದೇ ಇನ್ನಿತರ ಆಮಿಷಗಳಿಗೆ ಒಳಗಾಗದೆ ಕಡ್ಡಾಯವಾಗಿ ನಿಮ್ಮ ಅಮೂಲ್ಯವಾದ ಮತವನ್ನು ಚಾಲಿಸುವಂತೆ ಕರೆ ನೀಡಿದರು.

ವಿಜಯ ಪಾಟೀಲ ರವರು ಮಾತನಾಡಿ, ಗ್ರಾಮದ ಪ್ರತಿಯೊಬ್ಬರು ಆರೋಗ್ಯವಾಗಿರಬೇಕು ಮತ್ತು ಕಡ್ಡಾಯವಾಗಿ ಮತದಾನವನ್ನು ಸಹ ಮಾಡುವುದು ನಿಮ್ಮೆಲ್ಲರ ಹಕ್ಕು ಮತ್ತು ಕರ್ತವ್ಯ ಎಂದು ತಿಳಿಸುತ್ತಾ ನರೇಗಾ ಕೂಲಿಕಾರರು 100 ದಿವಸ್ ಕೆಲಸವನ್ನು ಪಡದುಕೊಳ್ಳಬೇಕು ಹಾಗೂ ಹೆಚ್ಚಿನ ಮಾನವ ದಿನಗಳನ್ನು ಸೃಜನೆ ಮಾಡಲು ಎಲ್ಲರ ಆರೋಗ್ಯ ಬಹಳ ಮುಖ್ಯ ಎಂದರು

ಡಾ. ಸಾಗರ ದೇಸಾಯಿ ರವರು ಗ್ರಾಮಸ್ಥರು ಕಡ್ಡಾಯವಾಗಿ ಮತದಾನವನ್ನು ಮಾಡುವುದು ಹಾಗೂ ಸುಭದ್ರ ಸರ್ಕಾರವನ್ನು ರಚನೆ ಮಾಡಲು ಕಡ್ಡಾಯ ಮತದಾನ ಮಾಡಬೇಕು ಮುಂದುವರೆದು ಪ್ರತಿಯೊಬ್ಬರು ಆರೋಗ್ಯದ ಕಡೆ ಗಮನಹರಿಸಬೇಕು ಶುದ್ಧವಾದ ಕುಡಿಯುವ ನೀರು ಹಾಗೂ ಆಹಾರವನ್ನು ಸೇವನೆ ಮಾಡುವಂತೆ ಕರೆ ಕೊಟ್ಟರು

ಡಾ. ಕುಂದರನಾಡ ರವರು ಮಾತನಾಡಿ ನಾಗನೂರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆರೋಗ್ಯಕ್ಕೆ ಸಂಬಂಧಿಸಿದಂತೆ, ಎಲ್ಲಾ ತರಹದ ಸೌಲಭ್ಯಗಳನ್ನು ಒದಗಿಸುವ ಮೂಲಕ ಸುತ್ತಮುತ್ತಿಲಿನ ಗ್ರಾಮಸ್ಥರಿಗೆ ತುಂಬಾ ಸಹಕಾರಿಯಾಗಿದೆ ಮತ್ತು ಎಲ್ಲರೂ ಆರೋಗ್ಯದ ಕಡೆ ಗಮನಹರಿಸಿ ಕಾಲಕಾಲಕ್ಕೆ ತಮ್ಮ ಆರೋಗ್ಯದ ಕಡೆ ಎಚ್ಚರ ವಹಿಸುವಂತೆ ತಿಳಿಸಿದರು.

ಉಪಸ್ಥಿತಿ, ವಿಜಯ ಪಾಟೀಲ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ವೈಧ್ಯಾಧಿಕಾರಿಗಳು ಬಿ ಆಯ್ ಕುಂದರನಾಡ ಮತ್ತು ಸಾಗರ ದೇಸಾಯಿ, ಜಿ ಎಫ್ ಮರೆಣ್ಣವರ ಪಂಚಾಯತ ಅಭಿವೃದ್ಧಿ ಅಧಿಕಾರಿ ಹಾಗೂ ಎಸ್ ಬಿ ಸಂಗನಗೌಡರ ಎಸ್ ವ್ಹಿ ಹಿರೇಮಠ, ನಾಗರಾಜ್ ಕಾಗತಿ, ಬಿ ಕೆ ಹರಿಜನ, ಸನೀಲ್ ತಲ್ಲೂರ ಹಾಗೂ ನರೇಗಾ ಕಾಯಕ ಬಂಧುಗಳು ಮತ್ತು ಕೂಲಿಕಾರರು ಗ್ರಾಮಸ್ಥರು ಒಟ್ಟು 245 ಜನರು ಪಾಲ್ಗೊಂಡು ಶಿಬಿರವನ್ನು ಯಶಸ್ವಿಗೊಳಿಸಿದರು.

# ಹಾಸ್ಯಕೂಟ ಕಾರ್ಯ ಶ್ಲಾಘನೀಯ: ಎಲ್. ಎಸ್. ಶಾಸ್ತ್ರಿ




ಬೆಳಗಾವಿ: ಹಲವಾರು ಮಾನಸಿಕ ಒತ್ತಡಗಳ ಮಧ್ಯೆ ನಗುವನ್ನ ಹುಡಿಕೊಂಡು ಹೋಗುವಂತಹ ಪರಿಸ್ಥಿತಿಯಿಂದು ನಿರ್ಮಾಣವಾಗಿದೆ.

ಇಂತಹ ವಾತಾವರಣದಲ್ಲಿ ಹಾಸ್ಯಕೂಟ ಅತ್ಯಂತ ಉತ್ತಮವಾದಂತಹ ಕೆಲಸವನ್ನ ಮಾಡುತ್ತ ಬಂದಿದೆ ಎಂದು ಹಿರಿಯ ಪತ್ರಕರ್ತ, ಲೇಖಕ ಎಲ್. ಎಸ್. ಶಾಸ್ತ್ರಿಯವರು ಇಂದಿಲ್ಲಿ ಹೇಳಿದರು.

ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ 'ಆಧುನಿಕ ತಂತ್ರಜ್ಞಾನ ವರವೋ... ಶಾಪವೋ...?' ಎಂಬ ಹರಟೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿದ ಶಾಸ್ತ್ರಿಯವರು ಮೇಲಿನಂತೆ ಅಭಿಪ್ರಾಯ ಪಟ್ಟರು.

ಅಧ್ಯಕ್ಷತೆ ಯನ್ನು ವಹಿಸಿದ್ದ ಹಿರಿಯ ಕವಿ ಪ್ರೊ. ಎಂ. ಎಸ್. ಇಂಚಲ ಅವರು ಆಧುನಿಕ ತಂತ್ರಜ್ಞಾನ ವರವೋ ಶಾಪವೂ ಒಟ್ಟಿನಲ್ಲಿ ತಂತ್ರಜ್ಞಾನವಿಂದು ಅನಿವಾರ್ಯವಾಗಿದೆ ಎಂದು ಹೇಳಿದರು.

ಸೂತ್ರಧಾರ ಸ್ಥಾನವನ್ನು ಅಲಂಕರಿಸಲಿದ್ದ ರಾಜೇಶ್ವರಿ ಹಿರೇಮಠ, ಈ ಆಧುನಿಕ ತಂತ್ರಜ್ಞಾನ ಹೀಗೆ ಮುಂದುವರೆದಲ್ಲಿ ಮನುಷ್ಯನನ್ನೇ ನುಂಗಿ ನೀರು ಕುಡಿಯ ಬಹುದೆಂಬ ಭಯವಿದೆ ಯಾದರೂ ತಂತ್ರಜ್ಞಾನ ಬಿಟ್ಟು ಬದುಕುವುದು ಅಸಾಧ್ಯದ ಮಾತು. ತಂತ್ರಜ್ಞಾನವನ್ನು ಒಳ್ಳೆಯದಕ್ಕೆ ಉಪಯೋಗಿಸಿಕೊಂಡು ಹಿತ ಕಾಯ್ದುಕೊಂಡು ಹೋಗುವುದು ಮನುಷ್ಯನ ಕೈಯಲ್ಲಿದೆ ಎಂದು ಹೇಳಿದರು.

ಆಧುನಿಕ ತಂತಜ್ಞಾನ ವರವೆಂದ ಡಾ. ಭಾರತಿ ಮಠದ, ಪವಿತ್ರಾ ಹಿರೇಮಠ, ಇಂದಿರಾ ಮೋಟೆಬೆನ್ನೂರ ಇವರು ಈಗ ಕಾಲ ಬದಲಾಗಿದೆ. ಜಗತ್ತು ಮುಂದುವರೆದಿದೆ. ಶಿಕ್ಷಣ, ವೈದ್ಯಕೀಯ, ಇಂಜನಿಯರಿಂಗ್ ಹೀಗೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ಪ್ರಗತಿಯನ್ನು ಕಾಣುತ್ತಿರುವುದು ತಂತ್ರಜ್ಞಾನದಿಂದ, ಅದಿಲ್ಲದ ಮನುಷ್ಯ ಬದುಕೇ ಅಸಾಧ್ಯ ಈ ತಂತ್ರಜ್ಞಾನ ವರವಾಗಿದೆ ಎಂದು ಹೇಳಿದರು.

ಆಧುನಿಕ ತಂತ್ರಜ್ಞಾನ ಶಾಪವೆಂದ ಕೀರ್ತಿಶೇಖರ ಕಾಸರಗೋಡ, ಸುನಂದಾ ಎಮ್ಮಿ, ಸುನಿತಾ ದೇಸಾಯಿ ಇವರು ಮನುಷ್ಯ ಬುದ್ದಿಮತ್ತೆ ಕ್ಷೀಣಿ ಸುತ್ತಿರುವುದು, ಹಲವಾರು ಕಲೆಗಳು ನಶಿಸಿ ಹೋಗುತ್ತಿರುವುದು, ಮನುಷ್ಯ ಮನುಷ್ಯರ ನಡುವಿನ ಸಂಬಂಧ, ಅಂತಃಕರಣ ಪ್ರೀತಿ ಹಾಳಾಗುತ್ತಿರುವುದಕ್ಕೆ ಅಲ್ಲದೇ ಮಕ್ಕಳು, ಯುವಕರನ್ನು ಅಡ್ಡದಾರಿಗೆ ಎಳೆಯುತ್ತಿರುವ ತಂತ್ರಜ್ಞಾನವಿಂದು ಶಾಪವಾಗಿ ಪರಣಮಿಸಿದೆ ಎಂದು ಹೇಳಿದರು.

ರಾಮಚಂದ್ರ ಕಟ್ಟಿ ಉಪಸ್ಥಿತರಿದ್ದರು. ಗುಂಡೇನಟ್ಟಿ ಮಧುಕರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಜಿ. ಎಸ್. ಸೋನಾರ ನಿರೂಪಿಸಿದರು. ನವಿಲೂರಿನ ತಾನಾಜಿ ವಂದಿಸಿದರು.

## ನಿಧನ ವಾರ್ತೆ

### ಅಂಜಲಿಬೇನ ಕಿರಣ ಶಹಾ



ಬೆಳಗಾವಿ : ಬೆಳಗಾವಿ ನಿವಾಸಿ ಹಾಗೂ ಸಧ್ಯಕ್ಕೆ ಸಾಂಗಲಿಯಲ್ಲಿ ವಾಸಿಸುತ್ತಿದ್ದ ಅಂಜಲಿಬೇನ ಕಿರಣ ಶಹಾ ( ವ.75) ಇವರು ಏಪ್ರಿಲ 6 ರಂದು ನಿಧನರಾದರು. ಮೃತರು ತಮ್ಮ ಹಿಂದೆ ಮೂವರು ಸಹೋದರರು, ಓರ್ವ ಪುತ್ರ, ಓರ್ವ ಪುತ್ರಿ, ಸೇರಿದಂತೆ ಅಪಾರ ಬಂಧು ಬಳಗವನ್ನು ಬಿಟ್ಟು ಅಗಲಿದ್ದಾರೆ.

ಅಂಜಲಿಬೇನ ಶಹಾ ಇವರು ಬ್ಯಾಂಕ ಆಫ್ ಇಂಡಿಯಾ ನಿವೃತ್ತ ಮ್ಯಾನೇಜರ ಕಿರಣ ಶಹಾ ಅವರ ಸಹೋದರಿಯಾಗಿದ್ದರು.

# ಕುಡಿದ ಮತ್ತಿನಲ್ಲಿ ಬೃಹತ್ ಹೋರ್ಡಿಂಗ್ಸ್ ಮೇಲೇರಿ ಯುವಕ ಪುಂಡಾಟ



ಹುಬ್ಬಳ್ಳಿ: ಕುಡಿದ ಮತ್ತಿನಲ್ಲಿ ಬೃಹತ್ ಜಾಹೀರಾತು ಕಂಬವೇರಿ ಯುವಕನೋರ್ವ ಪುಂಡಾಟ ನಡೆಸಿದ ಘಟನೆ ಹುಬ್ಬಳ್ಳಿಯಲ್ಲಿ ನಡೆದಿದೆ.

ಹುಬ್ಬಳ್ಳಿಯ ಸ್ಟೇಶನ್ ರಸ್ತೆಯಲ್ಲಿ ಜಾಹೀರಾತಿನ ಬೃಹತ್ ಹೋರ್ಡಿಂಗ್ಸ್ ಮೇಲೆ ಯುವಕ ಕೆಲ ಹೊತ್ತು ಪುಂಡಾಟ ನಡೆದಿದ್ದಾನೆ.

ಕುಡಿದ ಮತ್ತಿನಲ್ಲಿ ಪಾಲಿಕೆಯಿಂದ ಜಾಹೀರಾತಿಗಾಗಿ ಹಾಕಲಾಗಿದ್ದ ಹೋರ್ಡಿಂಗ್ಸ್ ಕಂಬದ ಮೇಲೇರಿದ ಯುವಕ ಕೆಲ ಹೊತ್ತು ಅದರ ಮೇಲೆ ಕುಳಿತು ಆತಂಕ ಸೃಷ್ಟಿಸಿದ್ದಾನೆ.

ಜನ ಎಷ್ಟೇ ಹೇಳಿದರೂ ಯುವಕ ಮಾತ್ರ ಕೆಳಗಿಳಿದಿಲ್ಲ. ಹೀಗಾಗಿ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಸ್ಥಳಕ್ಕೆ ಬಂದ ಪೊಲೀಸರು ಯುವಕನನ್ನು ಸುರಕ್ಷಿತವಾಗಿ ಕೆಳಗಿಳಿಸಿದ್ದಾರೆ.

ಸದ್ಯ ಯುವಕನ ಮಾಹಿತಿ ಕಲೆ ಹಾಕುತ್ತಿದ್ದಾರೆ. ಯುವಕನ ಪುಂಡಾಟದ ದೃಶ್ಯ ಸಾಮಾಜಿಕ ಜಾಲತಾಣ ಗಳಲ್ಲಿ ವೈರಲ್ ಆಗುತ್ತಿವೆ.

# ಟ್ರೆಂಡ್ಸ್ ಮಳಿಗೆ ಮೂಡಲಗಿಯಲ್ಲಿ ಆರಂಭ

TRENDS
GET THEM TALKING

ಬೆಳಗಾವಿ: ಉಡುಪು ಮತ್ತು ಪರಿಕರಗಳ ವಿಶೇಷ ಸರಣಿಯಾದ ರಿಲಯನ್ಸ್ ರಿಟೇಲ್‌ನ ಟ್ರೆಂಡ್ಸ್, ಬೆಳಗಾವಿ ಜಿಲ್ಲೆಯ ಮೂಡಲಗಿ ಪಟ್ಟಣದಲ್ಲಿ ತನ್ನ ಹೊಸ ಮಳಿಗೆ ಆರಂಭಿಸಿದೆ.

ಟ್ರೆಂಡ್ಸ್ ಭಾರತದಲ್ಲಿ ತನ್ನ ವ್ಯಾಪ್ತಿಯನ್ನು ಮೆಟ್ರೊ ನಗರಗಳಿಂದ ಹಿಡಿದು ಮಿನಿ ಮೆಟ್ರೋಗಳು, 1ನೇ ಹಾಗೂ 2ನೇ ಶ್ರೇಣಿಯ ಪಟ್ಟಣಗಳು ಮತ್ತು ಅದರಾಚೆಗೆ ಬಲಪಡಿಸುವ ಮೂಲಕ ದೇಶದ ಗ್ರಾಹಕರೊಂದಿಗೆ ಸಂಪರ್ಕ ಸಾಧಿಸಿ ನೆಚ್ಚಿನ ಫ್ಯಾಷನ್ ತಾಣವಾಗಿದ್ದು, ನಿಜವಾಗಿಯೂ ಪ್ರಜಾಪ್ರಭುತ್ವವನ್ನು ಪ್ರಜಾಪ್ರಭುತ್ವಗೊಳಿಸುತ್ತಿದೆ.

ಮೂಡಲಗಿಯ ಟ್ರೆಂಡ್ಸ್ ಮಳಿಗೆ, ಆಧುನಿಕ ನೋಟ ಮತ್ತು ವಾತಾವರಣ ಹೊಂದಿದ್ದು, ಈ ಪ್ರದೇಶದ ಗ್ರಾಹಕರಿಗೆ ಸಂಬಂಧಿಸಿದ ಮತ್ತು ಕೈಗೆಟುಕುವ ಬೆಲೆಯಲ್ಲಿ ದೊರಕುವ ಮತ್ತು ಹಣಕ್ಕೆ ಹೆಚ್ಚಿನ ಮೌಲ್ಯವನ್ನು ಒದಗಿಸುವ ಅತ್ಯಾಕರ್ಷಕ ಶ್ರೇಣಿಯ ಉತ್ತಮ ಗುಣಮಟ್ಟದ ಮತ್ತು ಫ್ಯಾಶನ್ ಸರಕುಗಳನ್ನು ಒಳಗೊಂಡಿದೆ.

ಈ ಪಟ್ಟಣದ ಗ್ರಾಹಕರು ಟ್ರೆಂಡಿ ವುಮೆನ್ಸ್ ವೇರ್, ಮೆನ್ಸ್ ವೇರ್, ಕಿಡ್ಸ್ ವೇರ್ ಮತ್ತು ಫ್ಯಾಶನ್ ಆಕ್ಸೆಸರಿಸ್, ಆಹ್ಲಾದಕರ ಬೆಲೆಯಲ್ಲಿ ಶಾಪಿಂಗ್ ಮಾಡುವ ವಿಶಿಷ್ಟವಾದ ವಿಶೇಷ ಮತ್ತು ಉತ್ಕೃಷ್ಟ ಅನುಭವವನ್ನು ಎದುರು ನೋಡಬಹುದು.

ಮೂಡಲಗಿ ಪಟ್ಟಣದ ಮೊದಲ ಮಳಿಗೆಯಾಗಿರುವ ಈ 6675 ಚದರ ಅಡಿ ಮಳಿಗೆಯು ಉತ್ತಮ ಪ್ರಸ್ತುತವೆನಿಸುವ ಫ್ಯಾಷನ್ ಮತ್ತು ಅದ್ಭುತ ಬೆಲೆಗಳ ಜತೆಗೆ ತನ್ನ ಗ್ರಾಹಕರಿಗೆ ವಿಶೇಷವಾದ ಉದ್ಘಾಟನಾ ಕೊಡುಗೆಯನ್ನು ಹೊಂದಿದೆ.

ರೂ. 3999 ಕ್ಕೆ ಶಾಪಿಂಗ್ ಮಾಡಿ ಮತ್ತು ರೂ. 249 ಕ್ಕೆ ಅತ್ಯಾಕರ್ಷಕ ಉಡುಗೊರೆಯನ್ನು ಪಡೆಯಬಹುದು. ಇದಲ್ಲದೇ ಗ್ರಾಹಕರು ರೂ.3999 ಖರೀದಿ ಮಾಡಿ ರೂ. 2000 ಮೌಲ್ಯದ ಕೂಪನ್ ಅನ್ನು ಸಂಪೂರ್ಣವಾಗಿ ಉಚಿತವಾಗಿ ಪಡೆಯಲಿದ್ದಾರೆ.

# ಕೈ ಅಧಿಕಾರಕ್ಕೆ ತರಲು ಸಂಘಟಿತರಾಗಿ: ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ



ಯಮಕನಮರಡಿ: ಜನಪರ ಪ್ರಗತಿ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದ ಚುಕ್ಕಾಣಿ ಹಿಡಿಯಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಸಂಘಟಿತರಾಗಿ ಬೂತ್ ಮಟ್ಟದಲ್ಲಿ ಪಕ್ಷ ಕಟ್ಟುವಂತೆ ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಕಲಖಾಂಬ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆ ಉದ್ದೇಶಿಸಿ ಮಾತನಾಡಿದ ಅವರು, ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಹುಮತ ನೀಡಬೇಕೆಂದು ಕೋರಿದರು.

ಮತಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಹಾಗೂ ಪರಿಹಾರ ಕಲ್ಪಿಸಲು ಪ್ರಯತ್ನಿಸುವುದು ನನ್ನ ಕರ್ತವ್ಯ. ಅಲ್ಲದೆ ನಾನು ಕೇವಲ ಚುನಾವಣೆ ಸಂದರ್ಭದಲ್ಲಿ ಮಾತ್ರ ರಾಜಕೀಯ ಮಾಡುತ್ತೇನೆ. ತದ ನಂತರ ಅಭಿವೃದ್ಧಿಯೇ ನನ್ನ ಮೊದಲ ಆದ್ಯತೆ. ಜತೆಗೆ ನನ್ನ ಕಾರ್ಯಕರ್ತರ ಹಿತ ಕಾಪಾಡುವುದು ನನ್ನ ಜವಾಬ್ದಾರಿ ಎಂದು ತಿಳಿಸಿದರು.

ದಿನಬಳಕೆ ವಸ್ತುಗಳ ಬೆಲೆ ಏರಿಕೆಯಿಂದಾಗಿ ಬಡವರ ಬದುಕು ದುಸ್ತರವಾಗಿದೆ. ಕೇಂದ್ರದ ಮೋದಿ ಹಾಗೂ ರಾಜ್ಯದ ಬಸವರಾಜ ಬೊಮ್ಮಾಯಿ ಸರ್ಕಾರಗಳ ಆಡಳಿತ ಪತನಗೊಳಿಸಲು ರಾಜ್ಯದ ಮತದಾರರು ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತರಬೇಕು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ತಿಳಿಸಿದರು.

ದಿನಬಳಕೆ ವಸ್ತುಗಳ ಬೆಲೆ ಏರಿಕೆಯಿಂದಾಗಿ ಬಡವರ ಬದುಕು ದುಸ್ತರವಾಗಿದೆ. ಕೇಂದ್ರದ ಮೋದಿ ಹಾಗೂ ರಾಜ್ಯದ ಬಸವರಾಜ ಬೊಮ್ಮಾಯಿ ಸರ್ಕಾರಗಳ ಆಡಳಿತ ಪತನಗೊಳಿಸಲು ರಾಜ್ಯದ ಮತದಾರರು ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತರಬೇಕೆಂದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ರಾಸಾಯನಿಕ ಗೊಬ್ಬರ, ಗ್ಯಾಸ್ ಸಿಲಿಂಡರ್ ಸೇರಿದಂತೆ ಎಲ್ಲಾ ವಸ್ತುಗಳ ಬೆಲೆ ಏರಿಕೆಯಾಗಿದೆ ಎಂದು ಕಿಡಿಕಾರಿದ ಅವರು, ಕುಡಿಯುವ ನೀರಿಗೆ ಮೀಟರ್ ಅಳವಡಿಕೆ, ಆಧಾರ್ ಲಿಂಕ್‌ಗೆ ಒಂದು ಸಾವಿರ ರು. ಪಾವತಿಸುವ ಅನಿವಾರ್ಯತೆ ಬಂದಿದೆ. ಇಂತಹ ಸರ್ಕಾರವನ್ನು ಕಿತ್ತೊಗೆದು ಶೋಷಿತ ಸಮಾಜವನ್ನು ಗುರುತಿಸಿ ರಾಜಕೀಯ, ಉದ್ಯೋಗ, ನೀರಾವರಿಯಂತಹ ಯೋಜನೆ ಜಾರಿಗೊಳಿಸಿ ಸರ್ವರಿಗೂ ಸಮಾನತೆ ಹಾಗೂ ಸಾಮಾಜಿಕ ನ್ಯಾಯ ಕಲ್ಪಿಸಿರುವ ಕಾಂಗ್ರೆಸ್ ಅನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಮಾಜಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಸರ್ವ ಸಮುದಾಯದ ಏಳಿಗೆಗೆ ಹಲವು ಯೋಜನೆ ಜಾರಿಗೆ ತಂದಿತು. ಕಾಂಗ್ರೆಸ್ ಆಳ್ವಿಕೆಯಲ್ಲಿ ಸ್ಥಾಪಿಸಿದ ಸಾರ್ವಜನಿಕ ಉದ್ದಿಮೆಗಳನ್ನು ಮೋದಿ ಸರ್ಕಾರ ಖಾಸಗೀಕರಣ ಮಾಡಿದೆ. ಗಂಗಾಮತಸ್ಥ ಜನಾಂಗವನ್ನು ಎಸ್‌ಟಿಗೆ ಸೇರಿಸುವ ಕುರಿತು ಪಕ್ಷ ಅಧಿಕಾರಕ್ಕೆ ಬಂದ ಬಳಿಕ ಜನಾಂಗದ ಶ್ರೀಗಳ ಜೊತೆ ಚರ್ಚಿಸಿ ಅನ್ಯಾಯ ಸರಿಪಡಿಸಲು ಮುಂದಾಗುತ್ತೇನೆ ಎಂದು ಭರವಸೆ ನೀಡಿದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089